ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 289 RNI Number : KNKAN/25/A2770 02-11-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ:01 ಸಂಚಿಕೆ:289 ರಾಯಚೂರು 02-11-2026 ಸೋಮವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ಇಂಡಿಯಾ ಕೂಟ ರ‍್ಯಾಲಿ: 90 ಲಕ್ಷ ಹೆಸರಿರುವ 500 ಮೀಟರ್ ಉದ್ದದ ಬ್ಯಾನರ್ ಪ್ರದರ್ಶನ

ನವದೆಹಲಿ: ಮತದಾರರ ಪಟ್ಟಿಯಿಂದ ಅಕ್ರಮವಾಗಿ ಜನರ ಹೆಸರನ್ನು ಅಳಿಸಿ ಹಾಕಲಾಗಿದೆ ಎಂದು ಆರೋಪಿಸಿ ಭಾನುವಾರ ಕಾಂಗ್ರೆಸ್ ನೇತೃತ್ವದ ಇಂಡಿಯಾ ಕೂಟ ನಡೆಸಿದ ಪ್ರತಿಭಟನೆಯಲ್ಲಿ 90 ಲಕ್ಷ ಜನರ ಹೆಸರುಗಳನ್ನು ಹೊಂದಿರುವ 500 ಮೀಟರ್ ಉದ್ದದ ಬಟ್ಟೆಯ ಬ್ಯಾನರ್ ಅನ್ನು ಪ್ರದರ್ಶಿಸಲಾಯಿತು. ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲಾದ ವ್ಯಕ್ತಿಗಳ ಹೆಸರುಗಳು ಇದರ ಮೇಲೆ ಬರೆಯಲಾಗಿದೆ ಎಂದು ಆಯೋಜಕರು ಹೇಳಿಕೊಂಡಿದ್ದಾರೆ.

ಈ ಬ್ಯಾನರ್ ತಯಾರಿಯಲ್ಲಿ ತೊಡಗಿಸಿಕೊಂಡಿದ್ದ ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯದ ಹಳೆಯ ವಿದ್ಯಾರ್ಥಿ ಮಹ್ಫೂಜ್ ಆಲಂ ಈಟಿವಿ ಭಾರತ್ ಜೊತೆ ಮಾತನಾಡಿ, ಮತದಾರರ ಹೆಸರುಗಳನ್ನು ತೆಗೆದುಹಾಕುವ ಪ್ರಕ್ರಿಯೆಯಲ್ಲಿ ನಡೆದಿರಬಹುದಾದ ಅಕ್ರಮಗಳ ಬಗ್ಗೆ ಸಾರ್ವಜನಿಕರ ಗಮನ ಸೆಳೆಯಲು ಈ ಪ್ರಯತ್ನ ಮಾಡಲಾಗಿದೆ. ಜನರು ತಮ್ಮ ಹೆಸರುಗಳನ್ನು ಗುರುತಿಸಲು ಮತ್ತು ಪರಿಶೀಲಿಸಲು ಅನುಕೂಲವಾಗುವಂತೆ, ಆಯಾ ಕ್ಷೇತ್ರಗಳ ಹೆಸರಿನೊಂದಿಗೆ ಈ ಹೆಸರುಗಳನ್ನು ಮುದ್ರಿಸಲಾಗಿದೆ ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿಯಿಂದ ತೆಗೆದುಹಾಕಲಾದ ಹೆಸರುಗಳನ್ನು ಮುದ್ರಿಸಿದಾಗ, ಕಾಗದದ ಬಂಡಲ್‌ಗಳು ಸೃಷ್ಟಿಯಾದವು. ಈ ಪತ್ರಗಳನ್ನು ಹೇಗೆ ವಿತರಿಸುವುದು ಮತ್ತು ಈ ವಿಷಯದ ಬಗ್ಗೆ ಜನರಿಗೆ ಹೇಗೆ ತಿಳಿಸುವುದು ಎಂದು ಯೋಚಿಸಿದೆವು. ಆಗ ನಮಗೆ ಈ ಹೆಸರುಗಳನ್ನು ಉದ್ದನೆಯ ಬಟ್ಟೆಯ ಮೇಲೆ ಮುದ್ರಿಸಿ, ರಾಮ್‌ಲೀಲಾ ಮೈದಾನದಲ್ಲಿ ಪ್ರದರ್ಶಿಸುವ ಆಲೋಚನೆ ಹೊಳೆಯಿತು ಎಂದು ಆಲಂ ವಿವರಿಸಿದರು.



ಈ ಬ್ಯಾನರ್‌ನಲ್ಲಿ 90 ಲಕ್ಷ ಜನರ ಹೆಸರುಗಳಿವೆ ಎಂದು ಹೇಳಿದ ಅವರು, ದೇಶದ ಒಟ್ಟು 13 ಕೋಟಿ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಆರೋಪಿಸಿದ್ದಾರೆ. ಆದರೆ, ಈ ಅಂಕಿಅಂಶಗಳನ್ನು ದೃಢೀಕರಿಸಲಾಗಿಲ್ಲ.

ಈ ಬ್ಯಾನರ್ ಮೇಲೆ ಬರೆಯಲಾದ ಹೆಸರುಗಳ ಫೋಟೋ ತೆಗೆದುಕೊಂಡು, ಚುನಾವಣಾ ಆಯುಕ್ತರ ವೆಬ್‌ಸೈಟ್‌ನಲ್ಲಿರುವ ಮಾಹಿತಿಯೊಂದಿಗೆ ಹೋಲಿಸಿ ಪರಿಶೀಲಿಸಲಿ ಎಂಬ ಉದ್ದೇಶದಿಂದ ಈ ಬ್ಯಾನರ್ ಅನ್ನು ಪ್ರದರ್ಶಿಸಲಾಗಿದೆ. ಪರಿಶೀಲನೆಯನ್ನು ಸುಲಭಗೊಳಿಸಲು ಹೆಸರುಗಳನ್ನು ಕ್ಷೇತ್ರವಾರು ಪಟ್ಟಿ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾದ ವ್ಯಕ್ತಿಗಳು, ಅವುಗಳನ್ನು ಮರುಸೇರ್ಪಡೆಗೊಳಿಸಲು ಅರ್ಜಿ ಸಲ್ಲಿಸಬಹುದು ಎಂಬ ವಾದಕ್ಕೆ ಪ್ರತಿಕ್ರಿಯಿಸಿದ ಆಲಂ, ಈ ಜವಾಬ್ದಾರಿಯು ಕೇವಲ ಬಾಧಿತ ಮತದಾರರ ಮೇಲೆ ಮಾತ್ರ ಇರಬಾರದು. ಯಾರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆಯೋ, ಅವರು ಅದನ್ನು ಮತ್ತೆ ಸೇರಿಸಿಕೊಳ್ಳಬಹುದು ಎಂದು ಜನರು ಹೇಳುತ್ತಾರೆ. ಹಾಗೆ ಮಾಡಬಹುದು. ಆದರೆ, ಅವರ ಹೆಸರುಗಳನ್ನು ತೆಗೆದುಹಾಕಿದ್ದೇ ಅಕ್ರಮ. ನಾನು ಒಬ್ಬ ವ್ಯಕ್ತಿಯನ್ನು ಸಮುದ್ರಕ್ಕೆ ತಳ್ಳಿ, ಅವರಿಗೆ ಈಜಲು ಗೊತ್ತು ಎಂದು ಹೇಳಿದರೆ, ಆ ವ್ಯಕ್ತಿಯನ್ನು ಸಮುದ್ರಕ್ಕೆ ತಳ್ಳಿದ ಕ್ರಮ ಸರಿಯೇ? ಎಂದು ಅವರು ಪ್ರಶ್ನಿಸಿದರು.

ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲಾದ ಮತದಾರರಿಗೆ ನೋಟಿಸ್ ನೀಡಲಾಗಿದೆಯೇ? ಅಥವಾ ಅವರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಅವರಿಗೆ ತಿಳಿಸಲಾಗಿದೆಯೇ ಎಂಬ ಬಗ್ಗೆ ಸ್ಪಷ್ಟನೆ ನೀಡಬೇಕೆಂದು ಅವರು ಚುನಾವಣಾ ಆಯೋಗವನ್ನು ಆಗ್ರಹಿಸಿದರು.

ತಮ್ಮ ಸಹೋದ್ಯೋಗಿಗಳು ಮತ್ತು ಕೆಲವು ಆಪ್ತರು ಹೆಸರು ಪಟ್ಟಿಯಿಂದ ಕೈಬಿಟ್ಟಿದ್ದನ್ನು ನಾನು ಗಮನಿಸಿದ್ದೇನೆ ಎಂದು ಆರೋಪಿಸಿದ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಇದರ ಹೊಣೆ ಹೊರಬೇಕು. ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಹೆಸರುಗಳನ್ನು ತೆಗೆದುಹಾಕಿದ ಘಟನೆಗೆ ಯಾರು ಕಾರಣರು ಎಂಬುದನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಸುನಿಲ್ ಕುಮಾರ್ ಪಾಂಡೆ ಎಂಬುವರು ಮಾತನಾಡಿ, ಯಾವುದೇ ಪೂರ್ವ ಸೂಚನೆ ನೀಡದೆ ನನ್ನ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಆರೋಪಿಸಿದರು. ಬ್ಯಾನರ್‌ನಲ್ಲಿ ಪ್ರದರ್ಶಿಸಲಾದ ಹೆಸರುಗಳನ್ನು ಪರಿಶೀಲಿಸಿದಾಗ, ತಮ್ಮ ಹೆಸರು ನಿಜವಾದ ಮತ ಪಟ್ಟಿಯಲ್ಲಿ ಇಲ್ಲ ಎಂಬುದು ತಮಗೆ ತಿಳಿದುಬಂದಿತು ಎಂದು ಹೇಳಿದರು.

ರಾಯಚೂರಿನಲ್ಲಿ ಸಂಭ್ರಮ, ಸಡಗರದಿಂದ ಕನ್ನಡ ರಾಜ್ಯೋತ್ಸವ ಆಚರಣೆ

ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರಿಂದ ಧ್ವಜಾರೋಹಣ, ಗೌರವ ವಂದನೆ ಸ್ವೀಕಾರ

ರಾಯಚೂರು, ನ. 1–

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ವತಿಯಿಂದ 71ನೇ ಕನ್ನಡ ರಾಜ್ಯೋತ್ಸವ ದಿನಾಚರಣೆಯನ್ನು ಸಂಭ್ರಮ ಮತ್ತು ಸಡಗರದಿಂದ ಆಚರಿಸಲಾಯಿತು.




ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಅವರು ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

ಬಳಿಕ ಕನ್ನಡ ರಾಜ್ಯೋತ್ಸವದ ಸಂದೇಶ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ. ವೆಂಕಟಸಿಂಗ್, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೋಪಾಲ ಗೆಣ್ಣೂರ, ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ್, ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ ಸೇರಿದಂತೆ ವಿವಿಧ ಇಲಾ ಖೆಗಳ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು, ಕನ್ನಡಾಭಿಮಾನಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ನಾಡು, ನುಡಿ, ಭಾಷೆ ಮತ್ತು ಸಂಸ್ಕೃತಿಯ ಅಭಿಮಾನವನ್ನು ಸಾರುವ ಕನ್ನಡ ರಾಜ್ಯೋತ್ಸವದ ಸಂಭ್ರಮಕ್ಕೆ ರಾಯಚೂರು ಕ್ರೀಡಾಂಗಣ ಸಾಕ್ಷಿ ಯಾಯಿತು.

ಸರ್ಕಾರಿ ನೌಕರರ ವೇತನ ಪ್ಯಾಕೇಜ್ ಯೋಜನೆಯಡಿ ಮೃತ ನೌಕರರ ಕುಟುಂಬಕ್ಕೆ ಬ್ಯಾಂಕ್ ನಿಂದ ₹1 ಕೋಟಿ ಚೆಕ್ ವಿತರಣೆ



ರಾಯಚೂರು, ನ.1


ಸರ್ಕಾರಿ ನೌಕರರ ವೇತನ ಪ್ಯಾಕೇಜ್ ಯೋಜನೆಯಡಿ ಅಪಘಾತದಲ್ಲಿ ಮೃತಪಟ್ಟ ಶ್ರೀ ಶರಣಪ್ಪ, ಸಮಾಜ ಕಲ್ಯಾಣ ಇಲಾಖೆ ದೇವದುರ್ಗ, ರವರ ಕುಟುಂಬಕ್ಕೆ ₹1 ಕೋಟಿ ಮೊತ್ತದ ಪರಿಹಾರ ಚೆಕ್ ಅನ್ನು ಮಾನ್ಯ ಶ್ರೀ ಡಾ. ಅಜಯ ಧರ್ಮಸಿಂಗ್ ಸನ್ಮಾನ್ಯ ಸಣ್ಣ ನೀರಾವರಿ,ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಕರ್ನಾಟಕ ಸರಕಾರ ಬೆಂಗಳೂರು ಹಾಗೂ ಸರ್ಕಾರಿ ನೌಕರರ ಸಂಘ ರಾಯಚೂರಿನ ಜಿಲ್ಲಾ ಘಟಕದ ಪದಾಧಿಕಾರಿಗಳ ನೇತೃತ್ವದಲ್ಲಿ ಇಂದು ವಿತರಿಸಲಾಯಿತು.

ನಗರದ ಶ್ರೀ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮೃತ ನೌಕರರ ಕುಟುಂಬದ ಸದಸ್ಯರಿಗೆ ಸಾಂತ್ವನ

3ನೇಯ ಪುಟಕ್ಕೆ

ಪತ್ನಿ, ಇಬ್ಬರು ಮಕ್ಕಳಿಗೆ ಕೊಲೆಮಾಡಿ ತಾನೂ ರೈಲ್ವೆ ಹಳಿಗೆ ಬಿದ್ದು ಆತ್ಮಹತ್ಯೆಗೆ ಶರಣಾದ ಪತಿ





ರಾಯಚೂರು, ನ. 1–

ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಕೊಲೆ ಮಾಡಿ ತಾನೂ ರೈಲ್ವೆ ಹಳಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡ ಧಾರುಣ ಘಟನೆ ರಾಯ ಚೂರು ನಗರದ ಜಲಾಲನಗರದಲ್ಲಿ ಭಾನು ವಾರ ಬೆಳಿಗ್ಗೆ ನಡೆದಿದೆ.

ಪತಿ ವಿಷ್ಣುರೆಡ್ಡಿ (45) ಪತ್ನಿ ಅರುಣಾ (36), ಮಗ ಶ್ಲೋಕ (10), ಮಗಳು ಖುಷಿ (7) ಉಸಿರುಗಟ್ಟಿ ಕೊಲೆ ಮಾಡಿ ಬಳಿಕ ತಾನೂ ರಾಯಚೂರು ತಾಲೂಕಿನ ಚಿಕ್ಕಸು ಗೂರು ಬಳಿಯ ರೈಲ್ವೆ ಹಳಿಗೆ ಬಿದ್ದು ಆತ್ಮ ಹತ್ಯೆ ಮಾಡಿಕೊಂಡಿದ್ದಾರೆ,

ಕೊಲೆಗೆ ನಿಖರ ಕಾರಣ ತಿಳಿದಿಲ್ಲ ಮೃತದೇಹಗಳು ರಿಮ್ಸ್ ಆಸ್ಪತ್ರೆಯ ಶವಗಾ ರಕ್ಕೆ ರವಾನಿಸಿದ್ದು, ಶವ ಪರೀಕ್ಷೆಯ ಬಳಿಕ ಸತ್ಯಾಂಶ ಹೊರಬರಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶುಗಿರಿ ತಿಳಿಸಿದರು.

ಘಟನೆ ಬಳಿಕ ಡಿವೈಎಸ್ ಪಿ ಶಾಂತವೀರ ನೇತೃತ್ವದ ಪೊಲೀಸರ ತಂಡ ಭೇಟಿ ನೀಡಿ

3ನೇಯ ಪುಟಕ್ಕೆ

ವಿದ್ಯಾರ್ಥಿಗಳ ಚರ್ಚೆಯ ವಿಷಯಗಳು ಜಿಲ್ಲೆಯ ಘನತೆಯನ್ನು ಎತ್ತಿ ಹಿಡಿಯುವಂತಿರಬೇಕು: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು, ನ. 1–

ಇಂದು ನೀವು ಚರ್ಚೆ ಮಾಡುವ ವಿಷಯಗಳು ಅತ್ಯಂತ ಮಹತ್ವದ್ದಾಗಿರಬೇಕು. ನಿಮ್ಮ ಮಾತುಗಳಲ್ಲಿ ಜಿಲ್ಲೆಯ ಗೌರವ ಮತ್ತು ಘನತೆಯನ್ನು ಎತ್ತಿಹಿಡಿಯುವಂತಹ ಸಭ್ಯತೆ ಹಾಗೂ ಸಂಯಮ ಇರಬೇಕು. ಅದೇ ರೀತಿ, ಪ್ರತಿಯೊಂದು ಸಮಸ್ಯೆಯ ಮಹತ್ವವನ್ನು ಅರಿತು, ಅದರ ಗಂಭೀರತೆಯನ್ನು ಎಲ್ಲರಿಗೂ ಮನವರಿಕೆ ಮಾಡಿಕೊಡುವ ರೀತಿಯಲ್ಲಿ ನಿಮ್ಮ ಚರ್ಚೆಗಳು ನಡೆಯಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು. ನವೆಂಬರ್ 01ರ ಭಾನುವಾರ ದಂದು ರಾಯಚೂರು ನಗರದ ಆಶಾಪೂರ ರಸ್ತೆಯಲ್ಲಿರುವ ಮಹರ್ಷಿ ವಾಲ್ಮೀಕಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆ ಮತ್ತು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಯುವ ಸಂಸತ್ತು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ, ಅವರು ಮಾತನಾಡಿದರು.



ನಮ್ಮ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಆಗಮಿಸಿರುವ ವಿದ್ಯಾರ್ಥಿಗಳು ಈ ಯುವ ಸಂಸತ್ ಕಾರ್ಯಕ್ರಮದಲ್ಲಿ ಭಾಗ ವಹಿಸುತ್ತಿರುವುದು ಸಂತಸದ ವಿಷಯವಾ ಗಿದೆ. ನಿಮ್ಮೆಲ್ಲರೂ ಅತ್ಯಂತ ಉತ್ಸಾಹದಿಂದ, ಆತ್ಮವಿಶ್ವಾಸದಿಂದ ಹಾಗೂ ಉತ್ತಮ ಸಿದ್ಧತೆಯೊಂದಿಗೆ ಕಾಣುತ್ತಿದ್ದೀರಿ ತಮ್ಮ ಕಾರ್ಯಕ್ರಮ ಉತ್ತಮವಾಗಿ ನಡೆಯಲಿ ತಮಗೆಲ್ಲರಿಗೂ ಕನ್ನಡ ರಾಜೋತ್ಸವದ ಶುಭಾಶಯಗಳು ಎಂದು ಹೇಳಿದರು.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಮಾತನಾಡಿ, ನಾವೆಲ್ಲರೂ ಚರ್ಚೆಯ ಮೂಲಕ ಒಂದೇ ಅಭಿಪ್ರಾಯಕ್ಕೆ ಬರುವುದು ಪ್ರಜಾಪ್ರಭುತ್ವದ ಒಂದು ಉತ್ತಮ ಮಾರ್ಗವಾಗಿದೆ. ಆದ್ದರಿಂದ ಯುವ ಸಂಸತ್ ಕಾರ್ಯಕ್ರಮವನ್ನು

3ನೇಯ ಪುಟಕ್ಕೆ

ಕನ್ನಡ ಭಾಷೆ ರಕ್ಷಣೆಗೆ ಕರವೇ ಮುಂಚೂಣಿ–ವೆಂಕಟಸಿಂಗ್

ರಾಯಚೂರು, ನ. 1–

ಕನ್ನಡ ನೆಲ ಜಲ ಭಾಷೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವವಲ್ಲಿ ಕರವೇ ಮುಂಚೂಣಿಯಲ್ಲಿದೆ ಎಂದು ಕಲ್ಬುರ್ಗಿ ಪೀಠದ ಮಾಹಿತಿ ಹಕ್ಕು ಆಯೋಗದ ಆಯುಕ್ತರು ಬಿ. ವೆಂಕಟಸಿಂಗ್ ಅವರು ಹೇಳಿದರು.



ಅವರು ನಗರದ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಕಚೇರಿಯಲ್ಲಿ ಕರ್ನಾಟಕ ರಾಜ್ಯೋ ತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ದೇಶದ ಯಾವ ರಾಜ್ಯಗಳಲ್ಲಿ ಆಯಾ ಭಾಷೆ ರಕ್ಷಣೆಗೆ ಯಾವುದೆ ಸಂಘಟನೆಗಳು ಹುಟ್ಟಿಕೊಂ ಡಿಲ್ಲ ಮತ್ತು ಸರಕಾರದ ಸಂಸ್ಥೆಗಳು ಇಲ್ಲ. ಇಡೀ ದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಮಾತ್ರ ಕನ್ನಡ ಭಾಷೆ ರಕ್ಷಣೆಗೆ ಕನ್ನಡಪರ ಸಂಘಟನೆಗಳು ಹಾಗೂ ಸರಕಾರದಿಂದ ಪ್ರಾಧಿಕಾರ ರಚನೆ ಮಾಡಿರುವುದು ದುರಂತದ ಸಂಗತಿ. ಕನ್ನಡ ಭಾಷೆ ಉಳಿಸಿ ಬೆಳೆಸುವ ಆಸಕ್ತಿ ಕನ್ನಡಿಗರಲ್ಲಿ ಇಲ್ಲ ಎಂಬ ನಿಟ್ಟಿನಲ್ಲಿ ಭಾಷೆ ರಕ್ಷಣೆಗೆ ಸರಕಾ ರದಿಂದ ಸಂಸ್ಥೆಗಳು ಹುಟ್ಟಿಕೊಂಡಿದೆ. ಕನ್ನಡ ನೆಲ ಜಲ ಭಾಷೆ ಸಂಸ್ಕೃತಿ ರಕ್ಷಣೆಗೆ ಕಳೆದ 25 ವರ್ಷಗಳಿಂದ ಕನ್ನಡ ಪರ ಸಂಘಟನೆಗಳು ನಿರಂತರವಾಗಿ ಹೋರಾಟ ಮಾಡುತ್ತಿದೆ. ಕನ್ನಡ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾ ವಿನೋದರೆಡ್ಡಿ ಅವರು ಕನ್ನಡ ಭಾಷೆ ರಕ್ಷಣೆ, ರೈತರ ಸಮಸ್ಯೆ ಹಾಗೂ ಜಿಲ್ಲೆಯ ಜ್ವಲಂತ ಸಮಸ್ಯೆಗಳ ಬಗ್ಗೆ ಹೋರಾಟ ಮಾಡುವವರಲ್ಲಿ ಮೊದಲಿಗರು. ವಿನೋದ ರೆಡ್ಡಿ ಅವರ ಸಮಾಜದಲ್ಲಿ ಮೂಲತ್ಮ ತೆಲುಗು ಭಾಷೆ ಮಾತನಾಡಿದರು.

ಕನ್ನಡ ಭಾಷೆ ರಕ್ಷಣೆ ನೆಲ ಜಲ ಭಾಷೆ ವಿಚಾರದಲ್ಲಿ ಕರವೇ

3ನೇಯ ಪುಟಕ್ಕೆ

ತಂತ್ರಜ್ಞಾನದ ವೇಗದಿಂದ ಅಳಿಯಲಾರದು ಕನ್ನಡ, ನಿತ್ಯ ನಿರಂತರ ಬೆಳೆಯುತಿಹುದು ಕನ್ನಡ - ಪ್ರೊ.ಕರಿಗೂಳಿ

ಗಂಗಾವತಿ,

ತಾಲೂಕಿನ ಶ್ರೀರಾಮನಗರದ ಚಿಲುಕೂರಿ ನಾಗೇಶ್ವರ ರಾವ್ ಸರಕಾರಿ ಪ್ರಥಮ ದರ್ಜೆ ಕಾಲೇಜ್ ನಲ್ಲಿ ದಿನಾಂಕ 1-11-2026 ರಂದು ಕನ್ನಡ ರಾಜೋತ್ಸ ವ ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಕಾಲೇಜಿನ ಪ್ರಾಂಶುಪಾಲರಾದ ಡಾ.ಕರಿಗೂಳಿಯವರು ಮಾತನಾಡಿ ಜನುಮ ನೀಡಿದವಳು ಮಾತೆಯಾದರೆ, ಕನ್ನಡಿಗರಿಗೆ ಕನ್ನಡವೂ ಮಾತೆ ''ಮಾತೃಭಾಷೆಯನ್ನು ಮರೆತವನು ತನ್ನ ಬೇರುಗಳನ್ನು ಮರೆತಂತೆ; ಕನ್ನಡವನ್ನು ಉಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಬೇಕು. ಭಾಷೆ ಎಂಬುದು ಕೇವಲ ಸಂವಹನದ ಸಾಧನವಲ್ಲ; ಅದು ಒಂದು ಜನಾಂಗದ ಸಂಸ್ಕೃತಿ, ಪರಂಪರೆ ಮತ್ತು ಅಸ್ಮಿತೆಯ ಪ್ರತಿಬಿಂಬ. ಕನ್ನಡ ಉಳಿಸಿ ಬೆಳೆಸುವುದು ನಮ್ಮ ಕರ್ತವ್ಯವಾಗಬೇಕೆಂದು



ಎಂದು ತಿಳಿಸಿದರು. ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ವೀರೇಶ ಜಿ ರವರು, ಮಾತನಾಡಿ ಕನ್ನಡಕ್ಕಾಗಿ ದುಡಿದವರನ್ನು ಸ್ಮರಿಸಿತ್ತಾ, ನಾವು ಕನ್ನಡವನ್ನು ಪ್ರೀತಿಸುವುದಷ್ಟೇ ಸಾಲದು, ನಮ್ಮ ನಿತ್ಯದ ಬದುಕಿನಲ್ಲಿ ಕನ್ನಡವನ್ನು ಬಳಸಬೇಕೆಂದರು, ಭಾಷೆ ಉಳಿದರೆ ಸಂಸ್ಕೃತಿ ಉಳಿಯುತ್ತದೆ, ಸಂಸ್ಕೃತಿ ಉಳಿದರೆ ನಮ್ಮ ಅಸ್ಮಿತೆ ಉಳಿಯುತ್ತದೆ. ಎಂದು ತಿಳಿಸಿದರು. ಕನ್ನಡ ಉಪನ್ಯಾಸಕರಾದ ಶ್ರೀ ವಿನಯಕುಮಾರ ರವರು ಕನ್ನಡ ಭಾಷೆಯ ಇತಿಹಾಸ ಮತ್ತು ಕರ್ನಾಟಕ ಏಕೀಕರಣದ ಕುರಿತು

3ನೇಯ ಪುಟಕ್ಕೆ

ಕೆಬಿಎನ್ ಆಸ್ಪತ್ರೆಯಲ್ಲಿ ಹಿಸ್ಟರೆಕ್ಟಮಿ, ಸುಧಾರಿತ ಲ್ಯಾಪರೊಸ್ಕೋಪಿ ಕುರಿತು ಕಾರ್ಯಾಗಾರ

ಕಲಬುರಗಿ :

ಖಾಜಾ ಬಂದೇ ನವಾಝ್ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ರಾಜ್ಯ ಪ್ರಸೂತಿ ಮತ್ತು ಸ್ತ್ರೀರೋಗ ಸಂಘದ () ಜಂಟಿ ಆಶ್ರಯದಲ್ಲಿ -2026 ಸಮ್ಮೇಳನದ ಅಂಗವಾಗಿ, ಖಾಜಾ ಬಂದಾನವಾಜ ಬೋಧನಾ ಹಾಗೂ ಸಾಮಾನ್ಯ ಆಸ್ಪತ್ರೆಯಲ್ಲಿ () ಹಿಸ್ಟರೆಕ್ಟಮಿ: ವಿಭಿನ್ನ ವಿಧಾನಗಳು ಮತ್ತು ಸುಧಾರಿತ ಲ್ಯಾಪರೊಸ್ಕೋಪಿ ಕುರಿತ ಕಾರ್ಯಾಗಾರ ಶುಕ್ರವಾರ ಯಶಸ್ವಿಯಾಗಿ ನಡೆಯಿತು.

ಕಾರ್ಯಾಗಾರದ ಮಹತ್ವದ ಕುರಿತು ಮಾತನಾಡಿದ ಪ್ರೊ. ಸೈಯದ್ ಅಶ್ಫಾಕ್ ಅಹಮದ್, ''ಈ ಕಾರ್ಯಾಗಾರವು ಅನೇಕ ಮಹಿಳೆಯರ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರಬಲ್ಲ ಅತ್ಯುತ್ತಮ ವೇದಿಕೆಯಾಗಿದೆ. ಭಾಗವಹಿಸಿದ ವೈದ್ಯರು ಹಾಗೂ ಪ್ರತಿನಿಧಿಗಳು ತಜ್ಞರೊಂದಿಗೆ ನೇರ ಸಂವಾದ ನಡೆಸಿ, ಅತ್ಯಾಧುನಿಕ ವೈದ್ಯಕೀಯ ತಂತ್ರಜ್ಞಾನ ಮತ್ತು ಕ್ಷೇತ್ರದ ಇತ್ತೀಚಿನ ಬೆಳವಣಿಗೆಗಳ ಕುರಿತು ಮಾಹಿತಿ ಪಡೆದುಕೊಂಡಿದ್ದಾರೆ'' ಎಂದರು.

ಆಸ್ಪತ್ರೆಯ ಧ್ಯೇಯೋದ್ದೇಶಗಳ ಕುರಿತು ಮಾತನಾಡಿದ ಅವರು, ''ಕೆಬಿಎನ್ ಆಸ್ಪತ್ರೆಯು ಸಮಾಜದ ಬಡ ಹಾಗೂ ಅಗತ್ಯವಿರುವ ಜನರಿಗೆ ಅತ್ಯುತ್ತಮ ಗುಣಮಟ್ಟದ ವೈದ್ಯಕೀಯ ಸೇವೆ ಒದಗಿಸಲು ಬದ್ಧವಾಗಿದೆ. ಈ ಭಾಗದ ಅತ್ಯಂತ ಸುಸಜ್ಜಿತ ವೈದ್ಯಕೀಯ ಕೇಂದ್ರವಾಗಿ ರೂಪುಗೊಳ್ಳುವ ನಿಟ್ಟಿನಲ್ಲಿ ಆಸ್ಪತ್ರೆಯ ಎಲ್ಲ ವಿಭಾಗಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ. ಸಾರ್ವಜನಿಕರ ಆರೋಗ್ಯ ರಕ್ಷಣೆಗಾಗಿ ನಿರಂತರವಾಗಿ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ'' ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕೆಬಿಎನ್ ವಿಶ್ವವಿದ್ಯಾಲಯದ ಕುಲಸಚಿವ ಮೀರ ವಿಲಾಯತ್ ಅಲಿ ಅವರು ವಿಶ್ವವಿದ್ಯಾಲಯವು ಸಮಾಜಕ್ಕೆ ನೀಡುತ್ತಿರುವ ಸೇವೆಯನ್ನು ಶ್ಲಾಘಿಸಿದರು. ವೈದ್ಯಕೀಯ ಕ್ಷೇತ್ರದ ಜ್ಞಾನವನ್ನು



ನವೀಕರಿಸಲು ಹಾಗೂ ಕೌಶಲಗಳನ್ನು ಹೆಚ್ಚಿಸಿಕೊಳ್ಳಲು ಇಂತಹ ಕಾರ್ಯಾಗಾರಗಳು ಅತ್ಯಗತ್ಯ ಎಂದು ತಿಳಿಸಿದ ಅವರು, ಸಂಘಟಕರಿಗೆ ಶುಭ ಹಾರೈಸಿದರು.

ಕರ್ನಾಟಕ ರಾಜ್ಯ ಪ್ರಸೂತಿ ಮತ್ತು ಸ್ತ್ರೀರೋಗ ಸಂಘದ ಮುಖ್ಯ ಪೋಷಕರಾದ ಡಾ. ಎಂ.ಜಿ. ಹಿರೇಮಠ ಅವರು ಸಂಘದ ಚಟುವಟಿಕೆಗಳ ಕುರಿತು ವಿವರಿಸಿ, ಕೆಬಿಎನ್ ಆಸ್ಪತ್ರೆಯ ಬೆಳವಣಿಗೆಗೆ ಸಂತಸ ವ್ಯಕ್ತಪಡಿಸಿದರು. ಅಲ್ಲದೆ, ಆಡಳಿತ ಮಂಡಳಿಯನ್ನು ಅಭಿನಂದಿಸಿದರು.

10 ಸಂಕೀರ್ಣ ಶಸ್ತ್ರಚಿಕಿತ್ಸೆ ಗಳ ನೇರ ಪ್ರಸಾರ :

ಕಾರ್ಯಾಗಾರದ ಪ್ರಮುಖ ಆಕರ್ಷಣೆಯಾಗಿ, ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ (ಒಟಿ) ನಡೆಸಲಾದ 10 ಸಂಕೀರ್ಣ ಶಸ್ತ್ರಚಿಕಿತ್ಸೆ ಗಳನ್ನು ಸೆಮಿನಾರ್ ಹಾಲ್‌ನಲ್ಲಿ ನೇರ ಪ್ರಸಾರ ಮಾಡಲಾಯಿತು. ಈ ಸಂದರ್ಭದಲ್ಲಿ ತಜ್ಞರೊಂದಿಗೆ ವೈದ್ಯರು ನೇರ ಸಂವಾದ ನಡೆಸಿದರು. ರಾಜ್ಯದ ವಿವಿಧ ಭಾಗಗಳಿಂದ ಸುಮಾರು 150ಕ್ಕೂ ಹೆಚ್ಚು ವೈದ್ಯರು ಹಾಗೂ ಅಭ್ಯರ್ಥಿಗಳು ನೋಂದಾಯಿಸಿಕೊಂಡು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಕೆಎಸ್‌ಒಜಿಎ ರಾಜ್ಯಾಧ್ಯಕ್ಷೆ ಡಾ. ರಾಜಶ್ರೀ ಪಾಲದಿ ಸ್ವಾಗತಿಸಿದರು. ಡಾ. ಫರತ್ ನಿರೂಪಿಸಿದರು. ಪ್ರಸೂತಿ ವಿಭಾಗದ ಮುಖ್ಯಸ್ಥೆ ಡಾ. ಮೆಹವೀಶ್ ಅಂಜುಮ ವಂದಿಸಿದರು.

ಈ ಸಂದರ್ಭದಲ್ಲಿ ಐ.ಕ್ಯೂ.ಎ.ಸಿ ನಿರ್ದೇಶಕ ಡಾ. ಅಬ್ದುಲ್ ಬಸೀರ್, ಮೆಡಿಕಲ್ ಡೀನ್ ಡಾ. ಗುರುಪ್ರಸಾದ್, ಅಕಾಡೆಮಿಕ್ ಡೀನ್ ಡಾ. ಜವಾ ಮೂಸ್ವಿ, ಮೆಡಿಕಲ್ ಅಧೀಕ್ಷಕ ಡಾ. ಸಿದ್ದಲಿಂಗ ಚೆಂಗಟಿ, ಆಡಳಿತಾಧಿಕಾರಿ ಡಾ. ರಾಧಿಕಾ ಪ್ರಸಾದ್, ಡಾ. ಸುಜಾತಾ, ಡಾ. ಆಯೇಷಾ ಹುಮೇರಾ, ಡಾ. ನಿವೇದಿತಾ, ಡಾ. ಶಾಂತಾ, ಡಾ. ಫರ್ಹತ್ ಕಾಜಿಮ, ಡಾ. ಪ್ರಿಯಾಂಕಾ ಬಿರಾದಾರ, ಡಾ. ಝೋಹ್ರಾ ಅಂಜುಮ, ಡಾ. ಸೈದಾ ಆಯೇಷಾ, ಡಾ. ಶ್ರೇಯಾ ಅಂಕ, ಡಾ. ಮಿಸ್ಬಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಭಾಲ್ಕಿ ಎಟಿಎಂ ಕಳವು ಪ್ರಕರಣ: ನಾಲ್ವರ ಬಂಧನ; ಲಕ್ಷಾಂತರ ಮೌಲ್ಯದ ಸೊತ್ತು ವಶ

ಬೀದರ್

ಭಾಲ್ಕಿಯ ಹಿರೇಮಠ್ ಸಂಸ್ಥಾನದ ಕಾಂಪ್ಲೆಕ್ಸ್ ನಲ್ಲಿರುವ ಎಟಿಎಂ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿ ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದ್ದು, 12 ಲಕ್ಷ ರೂ. ನಗದು ಸೇರಿದಂತೆ ಒಟ್ಟು 32 ಲಕ್ಷ ರೂ. ಮೌಲ್ಯದ ಸೊತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹೇಳಿದ್ದಾರೆ.

ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿಂದು ಮಾಹಿತಿ ನೀಡಿದ ಅವರು, ಹರ್ಯಾಣ ರಾಜ್ಯದವರಾದ ಆಸು (40), ಆಸಿಫ್ (25), ಅನೀಷ್ (47) ಹಾಗೂ ರಾಜಸ್ಥಾನ ರಾಜ್ಯದ ಭರತಪುರ್ ಜಿಲ್ಲೆಯ ರಾಹುಲ್ (23) ಬಂಧಿತ ಆರೋಪಿಗಳಾಗಿದ್ದಾರೆ. ಅ.25ರಂದು ಮಧ್ಯರಾತ್ರಿ ಭಾಲ್ಕಿಯ ಹಿರೇಮಠ್ ಸಂಸ್ಥಾನ ಮಠದ ಕಾಂಪ್ಲೆಕ್ಸ್ ನಲ್ಲಿರುವ ಎಟಿಎಂ ಒಳಗಡೆ ಪ್ರವೇಶಿಸಿದ ಕಳ್ಳರು ಗ್ಯಾಸ್ ಕಟರ್ ಬಳಸಿ 23 ಲಕ್ಷ 86 ರೂ. ಇರುವ ಎಟಿಎಂ ಕ್ಯಾಷೆಟ್ ಬಾಕ್ಸ್ ಕಳವು ಮಾಡಿದ್ದರು. ಪ್ರಕರಣವನ್ನು ಕೇವಲ ಐದು ದಿನಗಳಲ್ಲಿ ಭೇದಿಸಿದ್ದು, ಆರೋಪಿಗಳನ್ನು ಬಂಧಿಸಲಾಗಿದೆ ಎಂದರು.

ಆರೋಪಿಗಳನ್ನು ಪತ್ತೆಹಚ್ಚಲು ನಾಲ್ಕು ತಂಡಗಳು ರಚಿಸಲಾಗಿತ್ತು. ಹಾಗೆಯೇ ಎಐ ಕ್ಯಾಮೆರಾದಿಂದ ಪರಿಶೀಲಿಸಿದಾಗ ಆರೋಪಿಗಳು ತೆಲಂಗಾಣದ ಹೈದರಾಬಾದ್ ಗೆ ಹೋಗಿರುವ ಬಗ್ಗೆ ಖಚಿತಪಡಿಸಿಕೊಂಡು ಅ.30ರಂದು ಹೈದ್ರಾಬಾದ್ ನ ಶಾಹಿನ್ ನಗರದಲ್ಲಿ ಅವರನ್ನು ಬಂಧಿಸಲಾಗಿದೆ. ಆರೋಪಿಗಳಿಂದ 12 ಲಕ್ಷ ರೂ.ನಗದು, 20 ಲಕ್ಷ ರೂ. ಮೌಲ್ಯದ ಒಂದು ಕಾರು, ಸ್ಪ್ರೇ ಬಾಟಲ್, ಗ್ಯಾಸ್ ಕಟರ್ ಪೈಪ್, ಕಟಿಂಗ್ ಪ್ಲೇಯರ್, 2 ಮೊಬೈಲ್, 11 ವಿವಿಧ ರಾಜ್ಯಗಳ ನಂಬರ್ ಪ್ಲೇಟ್, ಗ್ಯಾಸ್ ಸಿಲಿಂಡರ್ ಆಕ್ಸಿ ಜನ್ ಸಿಲಿಂಡರ್ ಸೇರಿದಂತೆ ಹಲವು ವಸ್ತುಗಳು ವಶಕ್ಕೆ ಪಡೆಯಲಾಗಿದೆ ಎಂದು ಅವರು ಮಾಹಿತಿ ನೀಡಿದರು.



ಕಬ್ಬಿಗೆ ಸೂಕ್ತ ಬೆಲೆ ನಿಗದಿಗೆ ಆಗ್ರಹಿಸಿ ಮನವಿ

ಬೀದರ್ :

ರಾಜ್ಯದ ಕಬ್ಬು ಬೆಳೆಗಾರರಿಗೆ ನ್ಯಾಯಯುತ ಬೆಲೆ ದೊರಕಿಸಿಕೊಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರು ಸೇನೆಯ ಅಧ್ಯಕ್ಷ ಚುನ್ನಪ್ಪ ಪೂಜಾರಿ ಅವರು ಸಂಪೂರ್ಣ ಕರ್ನಾಟಕ ಬಂದ್‌ಗೆ ಕರೆ ನೀಡಿರುವ ಹಿನ್ನಲೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಬಣ) ಬೀದರ್ ಜಿಲ್ಲಾ ಘಟಕ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿ, ಮನವಿ ಪತ್ರ ಸಲ್ಲಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಸಲ್ಲಿಸಿದ ಮನವಿಯಲ್ಲಿ, ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಪ್ರತಿ ಟನ್ ಕಬ್ಬಿಗೆ 5,500 ರೂ. ಬೆಲೆ ನಿಗದಿಪಡಿಸಬೇಕು. ಕೃಷಿ ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಕಬ್ಬಿನ ಬೆಳೆಯಿಂದ ನ್ಯಾಯಯುತ ಆದಾಯ ದೊರೆಯುವಂತೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ರೈತರ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಕಬ್ಬಿಗೆ ಸೂಕ್ತ ಬೆಲೆ ನಿಗದಿಪಡಿಸಬೇಕು. ಇಲ್ಲದಿದ್ದರೆ ಮುಂಬರುವ ದಿನಗಳಲ್ಲಿ ಬೀದಿಗಿಳಿದು ತೀವ್ರ ಹೋರಾಟ ನಡೆಸಲಾಗುವುದು ಎಂದು ಸಂಘದ ಪದಾಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಯಾನಂದ್ ಸ್ವಾಮಿ ಸಿರ್ಸಿ, ಜಿಲ್ಲಾ ಗೌರವಾಧ್ಯಕ್ಷ ಸಿದ್ರಾಮಪ್ಪ ಆಣದೂರೆ, ಜಿಲ್ಲಾಧ್ಯಕ್ಷ ಶ್ರೀಮಂತ್ ಬಿರಾದಾರ್, ಹಸಿರು ಸೇನೆಯ ಅಧ್ಯಕ್ಷ ನೀಲಕಂಠ್ ಬುಯ್ಯಾ, ಜಿಲ್ಲಾ ಉಪಾಧ್ಯಕ್ಷ ಶಂಕರಪ್ಪ ಪಾರಾ, ರಾಜ್ಯ ಮಹಿಳಾ ಕಾರ್ಯದರ್ಶಿ ಶೋಭಾವತಿ ಕಾರಭಾರಿ, ರೈತ ಮುಖಂಡರಾದ ಸಂತೋಷ್ ವಲ್ಲಪೆ, ಸುಮಂತ್ ಗ್ರಾಮಲೆ, ವೀರಶೆಟ್ಟಿ ಬಿರಾದಾರ್, ಬಸಪ್ಪ ಮಳಗೆ, ಬಾಬು ಮಳಗೆ, ವೆಂಕಟರಾವ್ ವಲ್ಲಪೆ ಹಾಗೂ ಬಂಡೆಪ್ಪ ಕಮಠಾಣೆ ಸೇರಿದಂತೆ ಮತ್ತಿತರರು ಬೆಂಬಲ ವ್ಯಕ್ತಪಡಿಸಿದ್ದಾರೆ.

ಕಲಬುರಗಿ ಸಂಪೂರ್ಣವಾಗಿ ಆನ್‌ಲೈನ್ ನಲ್ಲಿ ನರ್ಸಿಂಗ್ ನೋಂದಣಿ; ಸಚಿವ ಶರಣಪ್ರಕಾಶ್ ಪಾಟೀಲ್

ಕಲಬುರಗಿ:

ಕರ್ನಾಟಕ ನರ್ಸಿಂಗ್ ಕೌನ್ಸಿಲ್‌ನ ಸೇವೆಗಳನ್ನು ಸಂಪೂರ್ಣವಾಗಿ ಆನ್‌ಲೈನ್‌ಗೊಳಿಸಲಾಗಿದ್ದು, ವಿದ್ಯಾರ್ಥಿಗಳು ಮತ್ತು ನರ್ಸ್‌ಗಳು ನೋಂದಣಿ ಹಾಗೂ ನವೀಕರಣಕ್ಕಾಗಿ ಬೆಂಗಳೂರಿಗೆ ಅಲೆಯುವ ಪ್ರಮೇಯ ತಪ್ಪಲಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಜಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಅವರು ಹೇಳಿದರು.

ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತಿನಿಂದ ಕಲಬುರಗಿ ವಿಭಾಗ ಮಟ್ಟದಲ್ಲಿ ಕೆಎಸ್‌ಎನ್‌ಸಿ ವತಿಯಿಂದ ಆಯೋಜಿಸಿದ ಆನ್ ಲೈನ್ ಮತ್ತು ಇತರ ಸೇವೆಗಳ ಕುರಿತಾದ ಜಾಗೃತ ಅಭಿಯಾನ ಕಾರ್ಯಾಗಾರವನ್ನು ಶನಿವಾರ ನಗರದ ಡಾ.ಎಸ್.ಎಂ. ರಂಗ ಮಂದಿರದಲ್ಲಿಉದ್ಘಾಟಿಸಿ ಮಾತನಾಡಿದರು.

ಹಿಂದೆ ನೋಂದಣಿ ಮತ್ತು ನವೀಕರಣ ಪ್ರಕ್ರಿಯೆಗಾಗಿ ಬೆಂಗಳೂರಿಗೆ ತೆರಳಿ ಸಾಲಿನಲ್ಲಿ ನಿಲ್ಲಬೇಕಾದ ಕಷ್ಟವಿತ್ತು. ಆದರೆ ಈಗ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವುದರಿಂದ ಎಲ್ಲವೂ ಮನೆಯಲ್ಲೇ ಕುಳಿತು ಆನ್‌ಲೈನ್ ಮೂಲಕ ಸುಲಭವಾಗಿ ನೆರವೇರಲಿದೆ. ಈ ವ್ಯವಸ್ಥೆಯಿಂದ ಆಡಳಿತದಲ್ಲಿ ಸಂಪೂರ್ಣ ಪಾರದರ್ಶಕತೆ ಬರಲಿದೆ ಎಂದು ಹರ್ಷ ವ್ಯಕ್ತಪಡಿಸಿದರು.



ರಾಜ್ಯದಲ್ಲಿ ಅತಿ ಹೆಚ್ಚು ವೈದ್ಯಕೀಯ ಕಾಲೇಜುಗಳು, ಪಿ.ಜಿ. ಸೀಟ್‌ಗಳು, ಎಂ.ಬಿ.ಬಿ.ಎಸ್. ಸೀಟ್‌ಗಳು (15,000ಕ್ಕೂ ಹೆಚ್ಚು) ಹಾಗೂ ನರ್ಸಿಂಗ್ ಮತ್ತು ಅಲಯಡ್ ಹೆಲ್ತ್ ಸೈನ್ಸ್ ಕಾಲೇಜುಗಳಿದ್ದು, ವೈದ್ಯಕೀಯ ಶಿಕ್ಷಣದಲ್ಲಿ ಕರ್ನಾಟಕವು ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ತಿಳಿಸಿದರು.

ಜರ್ಮನಿ, ಜಪಾನ್, ಇಟಲಿ ಸೇರಿದಂತೆ ವಿದೇಶಗಳಲ್ಲಿ ಭಾರತೀಯ ನರ್ಸ್‌ಗಳಿಗೆ ಮತ್ತು ಅಲಯಡ್ ಹೆಲ್ತ್ ಸೈನ್ಸ್ ಪದವೀಧರರಿಗೆ ಅತ್ಯಧಿಕ ಬೇಡಿಕೆ ಹಾಗೂ ಉತ್ತಮ ವೇತನವಿದೆ. ವಿದೇಶಗಳಲ್ಲಿ ಉದ್ಯೋಗ ಪಡೆಯಲು ಇಂಗ್ಲಿಷ್ ಜೊತೆಗೆ ಜಪಾನೀಸ್, ಜರ್ಮನ್ ಅಥವಾ ಇಟಾಲಿಯನ್ ನಂತಹ ವಿದೇಶಿ ಭಾಷೆಗಳನ್ನು ಕಲಿಯುವುದು ಅನಿವಾರ್ಯವಾಗಿದ್ದು, ವಿದ್ಯಾರ್ಥಿಗಳು ಭಾಷಾ ಕೌಶಲ್ಯವನ್ನು ಮೈಗೂಡಿಸಿಕೊಳ್ಳಬೇಕು ಎಂದು ಸಚಿವರು ಕಿವಿಮಾತು ಹೇಳಿದರು.

ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದ ಡಾ. ಶಿವಕುಮಾರ್ ಸಿ.ಆರ್ ಮಾತನಾಡಿ, ನರ್ಸಿಂಗ್ ಅಥವಾ ವೈದ್ಯಕೀಯ ವೃತ್ತಿ ಎಂದರೆ ಕೇವಲ ದೊಡ್ಡ ಹುದ್ದೆಯಲ್ಲ, ಅದಕ್ಕೆ ಕೌಶಲ್ಯ ಮತ್ತು ಜನರಿಗೆ ಸ್ಪಂದಿಸುವ 'ಸಹಾನುಭೂತಿ' () ಅತ್ಯಂತ ಮುಖ್ಯ. ನರ್ಸಿಂಗ್ ಮತ್ತು ವೈದ್ಯಕೀಯ ಕ್ಷೇತ್ರ ಕೇವಲ ಸಂಬಳಕ್ಕಾಗಿ ಅಲ್ಲದೆ, ರೋಗಿಗಳಿಗೆ ಪ್ರೀತಿ, ಪ್ರೇಮ ಹಾಗೂ ಧೈರ್ಯ ತುಂಬುವ ಮೂಲಕ ವೈದ್ಯರು ಮತ್ತು ನರ್ಸ್‌ಗಳು ಪರಸ್ಪರ ಕೈಜೋಡಿಸಿ ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಯಾವುದೇ ಕಠಿಣ ರೋಗವನ್ನೂ ಗುಣಪಡಿಸಬಹುದು ಎಂದು ಹೇಳಿದರು.

ಕುಲಸಚಿವ ಡಾ. ಶ್ರೀಕಾಂತ್ ಪುಲಾರಿ ಪ್ರಸ್ತಾವಿಕವಾಗಿ ಮಾತನಾಡಿ, 2018ಕ್ಕಿಂತ ಮೊದಲು ನರಸಿಂಗ್ ಕಾಲೇಜು ಮತ್ತು ಶಾಲೆಗಳವರು ನವೀಕರಣ () ಹಾಗೂ ಇತರ ಕೆಲಸಗಳಿಗಾಗಿ ಕೌನ್ಸಿಲ್‌ಗೆ ಕಾಗದಪತ್ರಗಳೊಂದಿಗೆ ಖುದ್ದಾಗಿ ಬಂದು ಸಾಲಿನಲ್ಲಿ ನಿಲ್ಲಬೇಕಿತ್ತು. ವಿದ್ಯಾರ್ಥಿಗಳು ಹಾಗೂ ಕಾಲೇಜಿನ ಸಿಬ್ಬಂದಿ ಕೌನ್ಸಿಲ್‌ಗೆ ಅಲೆಯುವುದನ್ನು ತಪ್ಪಿಸಿ, ಎಲ್ಲವೂ ಸುಲಭವಾಗಿ ಆನ್‌ಲೈನ್ ಮೂಲಕವೇ ದೊರೆಯುವಂತೆ ಮಾಡಿ ಸೌಲಭ್ಯ ಕಲ್ಪಿಸಲಾಗಿದೆ ಎಂದರು.

ಕಿರಣಕುಮಾರ್ ಅಣ್ಣಿಗೇರಿ ಅವರು ಕಾರ್ಯಾಗಾರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಾಗಾರದಲ್ಲಿ ಉಪಾಧ್ಯಕ್ಷ ವೆಂಕಟಗಿರಿ, ಸಂಪರ್ಕಾಧಿಕಾರಿ ಡಾ. ರುದ್ರಪ್ಪ ಗುಗ್ಗವಾಡ, ಮಡಿವಾಳಪ್ಪ ನಾಗರಹಳ್ಳಿ, ಸದಸ್ಯರಾದ ಡಾ. ಸಿದ್ದು ತಡಲಗಿ, ಚೆನ್ನಮ್ಮ ಗದಗೆ, ಸೇರಿದಂತೆ ವೈದ್ಯಕೀಯ ಶಿಕ್ಷಣ ಕ್ಷೇತ್ರದ ಹಿರಿಯ ಅಧಿಕಾರಿಗಳು ಹಾಗೂ ಕೆ.ಎನ್.ಸಿ. () ಪದಾಧಿಕಾರಿಗಳು, ನೂರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಸ್‌ಐಆರ್‌ನಿಂದ ಅರ್ಹ ಮತದಾರರ ಹೆಸರು ಕೈಬಿಡುವ ಆತಂಕ: ಸಿಪಿಐ ಆರೋಪ

ಕಲಬುರಗಿ :

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಹೆಸರಿನಲ್ಲಿ ದೇಶಾದ್ಯಂತ ಲಕ್ಷಾಂತರ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗುತ್ತಿದೆ. ಇದರಿಂದ ಅರ್ಹ ಮತದಾರರು ತಮ್ಮ ಮತದಾನದ ಹಕ್ಕನ್ನು ಕಳೆದುಕೊಳ್ಳುವ ಆತಂಕ ಎದುರಾಗಿದೆ ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಸಿಪಿಐ) ಆರೋಪಿಸಿದೆ.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪಕ್ಷದ ಮುಖಂಡರು, ಕಲಬುರಗಿ ಜಿಲ್ಲೆಯಲ್ಲಿ ಸುಮಾರು 4.77 ಲಕ್ಷ ಹಾಗೂ ರಾಜ್ಯದಲ್ಲಿ 99.32 ಲಕ್ಷ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿದಿರುವ ಕುರಿತು ಆತಂಕ ವ್ಯಕ್ತಪಡಿಸಿದರು. 2020ರಲ್ಲಿ ಜಾರಿಗೆ ತಂದ ಪೌರತ್ವ ತಿದ್ದುಪಡಿ ಕಾಯ್ದೆ ಹಾಗೂ ಮತದಾರರ ನೋಂದಣಿಗೆ ಸಂಬಂಧಿಸಿದ ನಿಯಮಗಳ ಹಿನ್ನೆಲೆಯಲ್ಲಿ ನಡೆಯುತ್ತಿರುವ ಪ್ರಕ್ರಿಯೆಗಳು ಪ್ರಜಾಪ್ರಭುತ್ವದ ಮೂಲ ಆಶಯಗಳಿಗೆ ಧಕ್ಕೆ ತರುವಂತಿವೆ. ಮತದಾರರ ಪಟ್ಟಿ ಪರಿಷ್ಕರಣೆಯ ಹೆಸರಿನಲ್ಲಿ ಅರ್ಹ ಮತದಾರರನ್ನು ಕೈಬಿಡಲಾಗಿದೆ ಎಂದು ಆರೋಪಿಸಿದರು.

ಅಂತಿಮ ಮತದಾರರ ಪಟ್ಟಿಯಿಂದ ಹೆಸರು ಕೈಬಿಡಲಾಗಿದೆ ಎನ್ನಲಾದ ಡಾ. ಸಂಪತ್ ರಾವ್, ಮರತೂರ ಗ್ರಾಮದ ಅಂಬರಾಯ್ಯ ಹಾಗೂ ಯಾದಗಿರಿಯ ಎಂ.ಡಿ. ಅತಿಕ್ ಅವರನ್ನು ಸುದ್ದಿಗೋಷ್ಠಿಯಲ್ಲಿ ಹಾಜರುಪಡಿಸಿ, ಎಸ್‌ಐಆರ್ ಪ್ರಕ್ರಿಯೆಯಲ್ಲಿನ ಲೋಪಗಳ ಕುರಿತು ಪ್ರಶ್ನಿಸಿದರು.

ರಾಜ್ಯದ ಜನಸಂಖ್ಯೆ 6.89 ಕೋಟಿ ಎಂದು



ಅಂದಾಜಿಸಲಾಗಿದ್ದು, ಅದರಲ್ಲಿ 18 ವರ್ಷಕ್ಕಿಂತ ಮೇಲ್ಪಟ್ಟವರ ಸಂಖ್ಯೆ 5.19 ಕೋಟಿ ಹಾಗೂ 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರ ಸಂಖ್ಯೆ 1.70 ಕೋಟಿ ಎಂದು ಅಂದಾಜಿಸಲಾಗಿದೆ. ಈ ಹಿಂದೆ ರಾಜ್ಯದ ಮತದಾರರ ಸಂಖ್ಯೆ 5.54 ಕೋಟಿ ಇತ್ತು. ಆದರೆ, ಪ್ರಸ್ತುತ ಎಸ್‌ಐಆರ್ ನಂತರ ಪ್ರಕಟಿಸಲಾದ ಅಂತಿಮ ಮತದಾರರ ಪಟ್ಟಿಯಲ್ಲಿ 4.55 ಕೋಟಿ ಮತದಾರರ ಹೆಸರುಗಳಿವೆ. ಸರ್ಕಾರದ ಜನಸಂಖ್ಯೆಯ ಅಂದಾಜಿನ ಪ್ರಕಾರ ನೋಡಿದರೂ ರಾಜ್ಯದಲ್ಲಿ 64 ಲಕ್ಷ ಜನರು ಏಕಾಏಕಿ ಕಾಣೆಯಾಗಿದ್ದಾರೆಯೇ? ಅವರೆಲ್ಲರೂ ವಿದೇಶಿಯರೇ ಎಂಬುದನ್ನು ಚುನಾವಣಾ ಆಯೋಗ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಪ್ರಸ್ತುತ ಎಸ್‌ಐಆರ್ ಪ್ರಕ್ರಿಯೆಯ ಮೂಲಕ ಅಂತಿಮಗೊಳಿಸಿರುವ ಮತದಾರರ ಪಟ್ಟಿಯು ಅಪೂರ್ಣವಾಗಿದೆ ಎಂದು ಆರೋಪಿಸಿದ ಮುಖಂಡರು, ಮತದಾರರ ಪಟ್ಟಿಯಿಂದ ಹೊರಗುಳಿದಿರುವ ಅರ್ಹ ಮತದಾರರ ಹೆಸರುಗಳನ್ನು ತಕ್ಷಣ ಸೇರ್ಪಡೆಗೊಳಿಸಬೇಕು. ಪಟ್ಟಿಯಲ್ಲಿ ಹೆಸರು ಕಾಣೆಯಾಗಿರುವ ಅಥವಾ ಅನರ್ಹರೆಂದು ಗುರುತಿಸಿರುವ ಪ್ರಕರಣಗಳಿಗೆ ಸೂಕ್ತ ಕಾರಣ ನೀಡಬೇಕು. ಸಂಬಂಧಪಟ್ಟ ಮತದಾರರಿಗೆ ತಮ್ಮ ಅಹವಾಲು ಸಲ್ಲಿಸಲು ಅವಕಾಶ ಕಲ್ಪಿಸಬೇಕು. ಎಸ್‌ಐಆರ್ ಪ್ರಕ್ರಿಯೆಯನ್ನು ಕೈಬಿಡಬೇಕು ಹಾಗೂ ಮತದಾರರ ಪಟ್ಟಿಯಿಂದ ತಾತ್ಕಾಲಿಕವಾಗಿ ಹೊರಗುಳಿದಿರುವ ಎಲ್ಲರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಆಗ್ರಹಿಸಿದರು.

ಚುನಾವಣಾ ಆಯೋಗದ ನೇಮಕಾತಿ ಪ್ರಕ್ರಿಯೆಯಲ್ಲಿ ಸುಪ್ರೀಂ ಕೋರ್ಟ್‌ನ ಹಿಂದಿನ ನಿರ್ದೇಶನಗಳನ್ನು ಪಾಲಿಸಬೇಕು. ಕಲಬುರಗಿ ಜಿಲ್ಲೆಯಲ್ಲಿ ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎನ್ನಲಾದ 4.77 ಲಕ್ಷ ಮತದಾರರ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಿಪಿಐ ಜಿಲ್ಲಾ ಕಾರ್ಯದರ್ಶಿ ಡಾ. ಮಹೇಶಕುಮಾರ ರಾಠೋಡ, ರಾಜ್ಯ ಮಂಡಳಿ ಸದಸ್ಯ ಕಾಂ. ಮೌಲಾ ಮುಲ್ಲಾ, ಡಾ. ಪಿ. ಸಂಪತ್ ರಾವ್, ಸಿದ್ದಪ್ಪ ಪಾಲ್ಕಿ, ಭೀಮಾಶಂಕರ್ ಮಾಡಿಯಾಳ, ಅಂಬರಾಯ್ಯ ಹಾಗೂ ಎಂ.ಡಿ. ಅತಿಕ್ ಉಪಸ್ಥಿತರಿದ್ದರು.

ವಸತಿ ಶಾಲೆಗಳ ಪ್ರಾಂಶುಪಾಲರು, ಮೇಲ್ವಿಚಾರಕರ ಅಂತರ್‌ಜಿಲ್ಲಾ ವರ್ಗಾವಣೆಗೆ ಆಗ್ರಹಿಸಿ ಮನವಿ

ಬೀದರ್,

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ವಿವಿಧ ಇಲಾಖೆಗಳ ಮೂಲಕ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಹಲವು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಮೇಲ್ವಿಚಾರಕರನ್ನು ಅಂತರ್‌ಜಿಲ್ಲಾ ವರ್ಗಾವಣೆ ಮಾಡಬೇಕು. ಶಾಲೆಗಳಿಗೆ ಬಿಡುಗಡೆಯಾದ ಅನುದಾನದ ಬಳಕೆಯ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಕುರಿತು ಗುರುವಾರ ಸಲ್ಲಿಸಿದ ಮನವಿಯಲ್ಲಿ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಧೀನದಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಇಂದಿರಾ ಗಾಂಧಿ, ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ವಿವಿಧ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ, ಶುದ್ಧ ಕುಡಿಯುವ ನೀರು, ಸೂಕ್ತ ಭದ್ರತೆ ಹಾಗೂ ಅಗತ್ಯ ಮೂಲಸೌಕರ್ಯಗಳು ಸಮರ್ಪಕವಾಗಿ ದೊರೆಯುತ್ತಿಲ್ಲ ಎಂಬ ದೂರುಗಳಿವೆ ಎಂದು ಆರೋಪಿಸಲಾಗಿದೆ.

ವಸತಿ ಶಾಲೆಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಸರ್ಕಾರ ಪ್ರತಿವರ್ಷ ಲಕ್ಷಾಂತರ ರೂಪಾಯಿ ಅನುದಾನ ಬಿಡುಗಡೆ ಮಾಡುತ್ತಿದ್ದರೂ, ಕೆಲವು ಶಾಲೆಗಳಲ್ಲಿ ಅನುದಾನದ ಸಮರ್ಪಕ ಬಳಕೆಯಾಗುತ್ತಿಲ್ಲ ಎಂಬ ಆರೋಪಗಳಿವೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಶಾಲೆಗಳಿಗೆ



ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ವಿದ್ಯಾರ್ಥಿಗಳೊಂದಿಗೆ ನೇರವಾಗಿ ಮಾತನಾಡಿ ಅವರ ಸಮಸ್ಯೆಗಳನ್ನು ಆಲಿಸಬೇಕು ಎಂದು ಒತ್ತಾಯಿಸಲಾಗಿದೆ.

ವಸತಿ ಶಾಲೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಹಾಗೂ ಆರ್ಥಿಕವಾಗಿ ದುರ್ಬಲ ಕುಟುಂಬಗಳ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಅವರ ಶೈಕ್ಷಣಿಕ ಹಿತದೃಷ್ಟಿಯಿಂದ ಶಾಲೆಗಳಲ್ಲಿನ ಅವ್ಯವಸ್ಥೆಗಳನ್ನು ಸರಿಪಡಿಸಿ, ಗುಣಮಟ್ಟದ ಶಿಕ್ಷಣದ ಜತೆಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಹಲವು ವರ್ಷಗಳಿಂದ ಒಂದೇ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಮೇಲ್ವಿಚಾರಕರನ್ನು ನಿಯಮಾನುಸಾರ ಅಂತರ್‌ಜಿಲ್ಲಾ ವರ್ಗಾವಣೆ ಮಾಡಬೇಕು. ಕಳೆದ ಐದು ವರ್ಷಗಳಲ್ಲಿ ವಸತಿ ಶಾಲೆಗಳಿಗೆ ಬಿಡುಗಡೆಯಾದ ಅನುದಾನದ ಬಳಕೆಯ ಕುರಿತು ಜಿಲ್ಲಾ ಮಟ್ಟದ ತನಿಖಾ ತಂಡ ರಚಿಸಿ ಪರಿಶೀಲನೆ ನಡೆಸಬೇಕು. ಕಳಪೆ ಗುಣಮಟ್ಟದ ಆಹಾರ ನೀಡಿರುವುದು ತನಿಖೆಯಲ್ಲಿ ದೃಢಪಟ್ಟರೆ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಜಿಲ್ಲೆಯ ಎಲ್ಲ ವಸತಿ ಶಾಲೆಗಳ ನಿರ್ವಹಣೆ, ಆಹಾರದ ಗುಣಮಟ್ಟ, ಕುಡಿಯುವ ನೀರು, ಸ್ವಚ್ಛತೆ ಹಾಗೂ ಭದ್ರತೆಯನ್ನು ಪರಿಶೀಲಿಸಲು ವಿಶೇಷ ತಂಡ ರಚಿಸಬೇಕು.

ಅನುದಾನ ದುರ್ಬಳಕೆಯಾಗಿರುವುದು ಕಂಡುಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ದಲಿತ ವಿದ್ಯಾರ್ಥಿ ಪರಿಷತ್‌ನ ಜಿಲ್ಲಾ ಸಂಚಾಲಕ ಸಂದೀಪ್ ಕಾಂಟೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಮೇಶ್ ಮಾಲೆ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅನೀಲಕುಮಾರ್ ಮುಡ್ಡೆ, ವಿನೋದ್ ಸಿಂಧೆ ಹಾಗೂ ಸಾಯಿ ಕೌರವ್ ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಸರ್ಕಾರಿ ನೌಕರರ ವೇತನ ಪ್ಯಾಕೇಜ್ ಯೋಜನೆಯಡಿ ಮೃತ ನೌಕರರ ಕುಟುಂಬಕ್ಕೆ ಬ್ಯಾಂಕ್ ನಿಂದ ₹1 ಕೋಟಿ ಚೆಕ್ ವಿತರಣೆ

ಸೂಚಿಸಿ, ಸರ್ಕಾರದ ಯೋಜನೆಗಳು ಸಂಕಷ್ಟದ ಸಂದರ್ಭದಲ್ಲಿ ಕುಟುಂಬಗಳಿಗೆ ಆರ್ಥಿಕ ಭದ್ರತೆ ನೀಡುತ್ತವೆ ಎಂದು ಮಾನ್ಯ ಸಚಿವರು ತಿಳಿಸಿದರು.

ಮೃತ ನೌಕರರ ಸೇವೆಯನ್ನು ಸ್ಮರಿಸಿ, ಅವರ ಕುಟುಂಬದೊಂದಿಗೆ ಸದಾ ಸರ್ಕಾರ ಹಾಗೂ ಸಂಘ ಇರುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಶ್ರೀ ಕೃಷ್ಣ ಶಾವಂತಗೇರಿ ಮಾತನಾಡಿ, ಸರ್ಕಾರದ ಈ ಪ್ಯಾಕೇಜ್ ಯೋಜನೆಯಿಂದ ಬಂದ ಹಣವನ್ನು ಸಂತ್ರಸ್ತ ಕುಟುಂಬ ಒಳ್ಳೆಯದಕ್ಕೆ ಬಳಸಿಕೊಂಡು, ಮಕ್ಕಳಿಗೆ ಶಿಕ್ಷಣ, ಕುಟುಂಬಕ್ಕೆ ಭದ್ರತೆ ನೀಡಲಿ ಎಂದು ಕರೆ ನೀಡಿದರು.

ಇದೆ ಸಂಧರ್ಭದಲ್ಲಿ ಕರ್ನಾಟಕ ಘನ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳಿಗೆ ಮತ್ತು ಉಪ ಮುಖ್ಯಮಂತ್ರಿಗಳಿಗೆ ಮತ್ತು ರಾಜ್ಯಾಧ್ಯಕ್ಷರಾದ ಶ್ರೀ ಸಿ ಎಸ್ ಷಡಾಕ್ಷರಿಯವರಿಗೆ ವಿಶೇಷ ಧನ್ಯವಾದಗಳನ್ನು ಸಲ್ಲಿಸಿದರು.

ಅಲ್ಲದೆ ಸಂಘದ ಪದಾಧಿಕಾರಿಗಳು ಮೃತ ನೌಕರರ ಕುಟುಂಬಕ್ಕೆ ಧೈರ್ಯ ತುಂಬಿ, ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾನ್ಯ ಜಿಲ್ಲಾಧಿಕಾರಿಗಳಾದ ಶ್ರೀಮತಿ ಪೂವಿತಾ ಎಸ್,ಭಾ.ಆ.ಸೇ,ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ರಾಯಚೂರು, ಮಾನ್ಯ ಪೋಲಿಸ್ ವರಿಷ್ಠಾಧಿಕಾರಿಗಳು ರಾಯಚೂರು, ಮಾನ್ಯ ಆಯುಕ್ತರು ಮಹಾನಗರ ಪಾಲಿಕೆ ರಾಯಚೂರು, ಬ್ಯಾಂಕ್ ನ ಅಧಿಕಾರಿಗಳಾದ ಶ್ರೀಮತಿ ಸೀತಾಬಾಯಿ ಪ್ರಾದೇಶಿಕ ವಲಯ ವ್ಯವಸ್ಥಾಪಕರು, ಶ್ರೀ ಯಂಕಪ್ಪ ಫಿರಂಗಿ,ಶ್ರೀ ರಾಜಶೇಖರ, ಸೇರಿದಂತೆ ಸಂಘದ ಪದಾಧಿಕಾರಿಗಳು, ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘದ ಪದಾಧಿಕಾರಿಗಳು, ನೌಕರರು ಹಾಗೂ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ಪತ್ನಿ, ಇಬ್ಬರು ಮಕ್ಕಳಿಗೆ ಕೊಲೆಮಾಡಿ ತಾನೂ ರೈಲ್ವೆ ಹಳಿಗೆ ಬಿದ್ದು ಆತ್ಮಹತ್ಯೆಗೆ ಶರಣಾದ ಪತಿ

ಸ್ಥಳೀಯರಿಂದ ಮಾಹಿತಿ ಪಡೆದರು.

ನಗರದ ಮಾರ್ಕೆಟ್ ಯಾರ್ಡ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ.

ತಂತ್ರಜ್ಞಾನದ ವೇಗದಿಂದ ಅಳಿಯಲಾರದು ಕನ್ನಡ, ನಿತ್ಯ ನಿರಂತರ ಬೆಳೆಯುತಿಹುದು ಕನ್ನಡ - ಪ್ರೊ.ಕರಿಗೂಳಿ

ತಿಳಿಸಿದರು. ಇತಿಹಾಸದ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಶಂಕ್ರಪ್ಪ ರವರು, ಕನ್ನಡ ಭಾಷೆಯ ಇಂದಿನ ಸ್ಥಿತಿಗಳು ಭಾಷೆಯ ಉಳಿವಿಗಾಗಿ ಕೈಗೊಳ್ಳುವ ಕ್ರಮಗಳನ್ನು ಕುರಿತು ಮಾತನಾಡಿದರು, ಈ ಕಾರ್ಯಕ್ರಮದ ನಿರೂಪಣೆಯನ್ನು ಸಾಂಸ್ಕೃತಿಕ ಸಂಚಾಲಕರಾದ ಡಾ.ವಿರಪಾಕ್ಷ ನಿರ್ವಹಿಸಿದರು ಕಾರ್ಯಕ್ರಮದಲ್ಲಿ ಅಧ್ಯಾಪಕರಾದ ಶ್ರೀ ರವಿಕುಮಾರ, ಉಪನ್ಯಾಸಕರಾದ ಮಲ್ಲೇಶ , ಕನಕಪ್ಪ ಹಾಗೂ ಆಡಳಿತ ಸಿಬ್ಬಂದಿಗಳಾದ , ಜಬೀನಾ ಬೇಗಂ ವಿನಾಯಕ, ಶಾಂತಿ,ಶರಣಬಸವ, ಹಾಗೂ ಕಾಲೇಜಿನ ಎಲ್ಲಾ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಚರ್ಚೆಯ ವಿಷಯಗಳು ಜಿಲ್ಲೆಯ ಘನತೆಯನ್ನುಎತ್ತಿ ಹಿಡಿಯುವಂತಿರಬೇಕು: ಜಿಲ್ಲಾಧಿಕಾರಿ

ಸಂತೋಷದಿಂದ ಅನುಭವಿಸಿ, ಇಲ್ಲಿ ದೊರೆಯುವ ಪ್ರತಿಯೊಂದು ಅವಕಾಶದಿಂದ ಹೊಸ ವಿಷಯಗಳನ್ನು ಕಲಿಯಿರಿ. ಏಕೆಂದರೆ ಇಂದಿನ ಯುವಕ–ಯುವತಿಯರೇ ಮುಂದಿನ ದಿನಗಳಲ್ಲಿ ದೇಶದ ಭವಿಷ್ಯದ ಶಕ್ತಿಯಾಗ ಲಿದ್ದಾರೆ. ನೀವು ಮುಂದಿನ ದಿನಗಳಲ್ಲಿ ಉನ್ನತ ಅಧಿಕಾರಿಗಳಾಗಬಹುದು, ಇಂಜಿನಿಯರ್‌ಗಳಾಗಬಹುದು, ವೈದ್ಯರಾಗಬಹುದು ಅಥವಾ ದೇಶವನ್ನು ಮುನ್ನಡೆಸುವ ಜನನಾಯಕರಾಗಬಹುದು ಎಂದು ಹೇಳಿದರು.

ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಅವರು ಮಾತನಾಡಿ, ಯುವಜನತೆ ದೇಶದ ಭವಿಷ್ಯ, ಸಂವಿಧಾನ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗೆ ಪ್ರತಿಯೊಬ್ಬ ನಾಗರಿಕನೂ ಬದ್ಧರಾಗಬೇಕು. ಜಿಲ್ಲಾಮಟ್ಟದ ಯುವ ಸಂಸತ್ ಕಾರ್ಯಕ್ರಮವನ್ನು ಇಂದು ಅತ್ಯಂತ ಅಚ್ಚುಕಟ್ಟಾಗಿ ಆಯೋಜಿಸಿರುವುದು ಸಂತೋಷದ ವಿಚಾರವಾಗಿದೆ. ಕಾರ್ಯುಕ್ರಮದ ಉದ್ಘಾಟನೆಯುಲ್ಲಿಯೂ ಯಾವುದೇ ಶಿಷ್ಟಾಚಾರದ ಲೋಪವಾಗದಂತೆ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷದ ನಾಯಕರನ್ನು ಆಹ್ವಾನಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೆಶಕರಾದ ಕೃಷ್ಣ ಶಾವಂತಗೇರಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಯುವ ಸಂಸತ್ ಕಾರ್ಯಕ್ರಮಗಳನ್ನು ಅತ್ಯಂತ ಅಚ್ಚುಕಟ್ಟಾಗಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮಗಳಲ್ಲಿ ಉತ್ತಮ ವಾಕ್ಚಾತುರ್ಯ ಪ್ರದರ್ಶಿಸಿ, ವಿಷಯದ ಮೇಲೆ ಆಳವಾದ ಪ್ರಭುತ್ವ ಸಾಧಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಜಿಲ್ಲಾ ಮಟ್ಟದ ಯುವ ಸಂಸತ್ ಕಾರ್ಯಕ್ರಮಕ್ಕೆ ಕಳುಹಿಸಿಕೊಡಲಾಗಿದೆ

ಇಂದಿನ ಕಾರ್ಯಕ್ರಮಕ್ಕೂ ಮುನ್ನ ಎರಡು–ಮೂರು ಬಾರಿ ಎಲ್ಲಾ ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಿ, ಯುವ ಸಂಸತ್ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಅಗತ್ಯವಾದ ಪೂರ್ವಸಿದ್ಧತೆ ಹಾಗೂ ತರಬೇತಿಯನ್ನು ನೀಡಲಾಗಿದೆ. ಈ ಕಾರ್ಯದಲ್ಲಿ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಎಂದು ಹೇಳಿದರು.ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ.ನಂದಿತಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಪ್ರಾಥಮಿಕ ಶಿಕ್ಷಣ ಸಂಘದ ಅಧ್ಯಕ್ಷರು, ಶಿಕ್ಷಕರು, ಪಾಲಕರು, ವಿದ್ಯಾರ್ಥಿಗಳು ಸೇರಿದಂತೆ ಇತರರು ಇದ್ದರು.

ಕನ್ನಡ ಭಾಷೆ ರಕ್ಷಣೆಗೆ ಕರವೇ ಮುಂಚೂಣಿ–ವೆಂಕಟಸಿಂಗ್

ಜಿಲ್ಲಾಧ್ಯಕ್ಷರಾಗಿ ನಿರಂತರ ಹೋರಾಟದ ಮೂಲಕ ಕನ್ನಡ ಭಾಷೆ ರಕ್ಷಣೆಗೆ ಶ್ರಮಿಸುತ್ತಿರುವ ಅವರ ಕಾರ್ಯ ಅತ್ಯಂತ ಶ್ಲಾಘನೀಯ ಎಂದು ಬಣ್ಣಿಸಿದರು. ಈ ಕನ್ನಡ ನಾಡಿನ ನೆಲ, ಜಲ, ಭಾಷೆ ರಕ್ಷಣೆಗೆ ಪ್ರತಿಯೊಬ್ಬರೂ ಕಂಕಣಬದ್ಧರಾಗೋಣ.ಕನ್ನಡ ಭಾಷೆ ರಕ್ಷಣೆಗೆ ಕರವೇ ಬಹುದೊಡ್ಡ ಕೊಡುಗೆ ನೀಡಿದೆ ಎಂದರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತ ಸಂಘದ ಜಿಲ್ಲಾಧ್ಯಕ್ಷರಾದ ಆರ್.ಗುರುನಾಥ ಅವರು ಮಾತನಾಡಿ, ಗಡಿನಾಡು ಪ್ರದೇಶದಲ್ಲಿ ಕನ್ನಡ ಶಾಲೆಗಳು ನಶಿಸಿ ಹೋಗುತ್ತಿದೆ.ಈ ಭಾಗದಲ್ಲಿ ಕನ್ನಡ ಶಾಲೆ ಹಾಗೂ ಭಾಷೆ ರಕ್ಷಣೆ ಬಹುದೊಡ್ಡ ಸವಾಲ್ ಆಗಿ ಮಾರ್ಪಟ್ಟಿದೆ. ಕನ್ನಡ ನೆಲ ಜಲ ಭಾಷೆ ಸಂರಕ್ಷಣೆಯಲ್ಲಿ ನಾವೆಲ್ಲರೂ ಒಗ್ಗಟ್ಟಾಗಿ ಹೋರಾಟ ನಡೆಸುವುದು ಅನಿವಾರ್ಯವಾಗಿದೆ ಎಂದರು.

ಕಾರ್ಯಕ್ರಮದ ದಿವ್ಯಾ ಸಾನಿಧ್ಯ ವಹಿಸಿ, ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ಮಾಡಿ, ಕರ್ನಾಟಕದಲ್ಲಿ ಕನ್ನಡ ಭಾಷೆ ಕಣ್ಮರೆಯಾಗುತ್ತದೆ ಎಂದು ಚಿಂತೆ ನಮ್ಮೆಲ್ಲರಲ್ಲಿ ಕಾಡುತ್ತಿದೆ.ತಮಿಳುನಾಡುನಲ್ಲಿ ತಮಿಳು ಭಾಷೆಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಮೂರನೇ ಭಾಷೆಯನ್ನಾಗಿ ಅನ್ಯ ಭಾಷೆಗಳನ್ನು ಬಳಸುತ್ತಿದ್ದಾರೆ. ತಮಿಳುಗರ ಮಾದರಿಯಲ್ಲಿ ಕರ್ನಾಟಕದಲ್ಲಿ ಕನ್ನಡ ಭಾಷೆಗೆ ಮೊದಲ ಆದ್ಯತೆ ನೀಡುವ ಮೂಲಕ ಅನ್ಯ ಭಾಷೆ ಗೌರವ ನೀಡಬೇಕು. ಕನ್ನಡ ನಾಡು ಅತ್ಯಂತ ಶ್ರೇಷ್ಠದ ನಾಡು.ಕನ್ನಡ ಭಾಷೆ ರಕ್ಷಣೆಗೆ ಕರ್ನಾಟಕದಲ್ಲಿ ಎಲ್ಲಾ ವಾಣಿಜ್ಯ ಮಳಿಗೆಗಳು, ಅಂಗಡಿ ಮುಂಗಟ್ಟು,ಕೈಗಾರಿಕೆಗಳು, ಸಂಸ್ಥೆಗಳು, ಆಸ್ಪತ್ರೆಗಳಲ್ಲಿ ನಾಮಫಲಕಗಳಲ್ಲಿ ಕಡ್ಡಾಯ ಬಳಕೆಗೆ ಸರಕಾರ ಆದೇಶ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಕನ್ನಡ ನೆಲ ಜಲ ಭಾಷೆ ರಕ್ಷಣೆಗೆ ಅನೇಕ ಹೋರಾಟದ ಮೂಲಕ ಕರ್ನಾಟಕ ರಕ್ಷಣಾ ವೇದಿಕೆ ಜನಮನದಲ್ಲಿ ಅಚ್ಚಳಿಯಾಗಿ ಉಳಿದುಕೊಂಡಿದೆ. ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ವಿನೋದರೆಡ್ಡಿ ಎಂ. ಅವರು ಮಾತನಾಡಿ, ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಸಾಮೂಹಿಕ ಅತ್ಯಾಚಾರ ಹಾಗೂ ಕೊಲೆ ಪ್ರಕರಣಗಳು ಹೆಚ್ಚಳಗೊಂಡಿದ್ದು, ಜಿಲ್ಲೆಯಲ್ಲಿ ಕಾನೂನು ಸುವವ್ಯಸ್ಥೆ ಸಂಪೂರ್ಣ ಹದಗೆಟ್ಟಿದೆ.ಕೊಲೆ ಪ್ರಕರಣಗಳ ಹೆಚ್ಚಳಕ್ಕೆ ಗಾಂಜಾ ಹಾಗೂ ಮಾದಕ ವಸ್ತುಗಳ ಬಳಕೆ ಪ್ರಮುಖ ಕಾರಣವಾಗಿದೆ. ಇಂತಹ ಘಟನೆಗಳು ಮರುಕಳುಹಿಸದಂತೆ ತಕ್ಷಣವೇ ಡಿಸಿ ಹಾಗೂ ಎಸ್ಪಿ ಅವರನ್ನು ವರ್ಗಾವಣೆ ಮಾಡಿ ದಕ್ಷ ಆಡಳಿತಗಾರರನ್ನು ನೇಮಕ ಮಾಡಬೇಕು. ಇಲ್ಲದಿದ್ದರೆ ಜಿಲ್ಲೆ ಬಂದ್ ಮಾಡಲಾಗುವುದು ಎಂದು ಎಚ್ಚರಿಸಿದರು.

ಶರಣಪ್ಪ ಗೋನಾಳ್ ಅವರು ಕಾರ್ಯಕ್ರಮ ನಿರೂಪಣೆ ಮಾಡಿದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಸಹಕಾರ ಕ್ಷೇತ್ರದ ಕೊಡುಗೆ ಅಪಾರ: ಎಸ್.ಎಸ್.ಸುಭಾಷಚಂದ್ರ ಬರ್ಮಾ



ಕಲಬುರಗಿ:

ಪ್ರಸ್ತುತ ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದೆ. ಅಮುಲ್, ಇಫ್ಕೋ, ನಂದಿನಿಯಂತಹ ದೇಶೀಯ ಉದ್ಯಮಗಳು ಮುಕ್ತ ಆರ್ಥಿಕ ನೀತಿಯ ಸವಾಲುಗಳನ್ನು ಎದುರಿಸಿ ಆರೋಗ್ಯಕರ ಪೈಪೋಟಿ ನೀಡುವ ಮೂಲಕ ಸಹಕಾರ ಕ್ಷೇತ್ರವನ್ನು ಜನಪ್ರಿಯಗೊಳಿಸುತ್ತಿವೆ ಎಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ನಿವೃತ್ತ ಉಪನಿರ್ದೇಶಕ ಎಸ್.ಎಸ್.ಸುಭಾಷಚಂದ್ರ ಬರ್ಮಾ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಬೆಂಗಳೂರು ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ವಿದ್ಯಾರ್ಥಿ ಕಲ್ಯಾಣ ವಿಭಾಗದ ಸಂಯುಕ್ತ ಆಶ್ರಯದಲ್ಲಿ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಸಹಕಾರ ತತ್ವ ವಿಷಯದ ಚರ್ಚಾಸ್ಪರ್ಧೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗುಲಬರ್ಗಾ ವಿಶ್ವವಿದ್ಯಾಲಯದ ಡಾ. ದೇವಿಂದ್ರಪ್ಪ ತೇಲ್ಕರ್ ಸರ್ಕಾರಿ ಮಹಾವಿದ್ಯಾಲಯದ ಸ್ವಾಯತ್ತ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಟಿ. ಗುರುಬಸಪ್ಪ ಮುಖ್ಯ ಅತಿಥಿಯಾಗಿ ಮಾತನಾಡಿದರು. ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್‌ನ ಪ್ರಾಂಶುಪಾಲ ಅರುಣಕುಮಾರ ಹರಸೂರ ಅತಿಥಿಗಳನ್ನು ಸ್ವಾಗತಿಸಿ ಕಾರ್ಯಕ್ರಮ ನಿರ್ವಹಿಸಿದರು. ಕಲಬುರಗಿ ಜಿಲ್ಲಾ ಸಹಕಾರ ಒಕ್ಕೂಟದ ಜಿಲ್ಲಾ ಸಹಕಾರ ಶಿಕ್ಷಕಿ ಇಸಾಮೈಲ್ ಬೀ ವಂದಿಸಿದರು. ಶಿಕ್ಷಕೇತರ ಸಿಬ್ಬಂದಿ ದೇವೇಂದ್ರಪ್ಪ, ಎಸ್. ಹುಲಿಕರ್, ಮಾಳಪ್ಪ ಶಾಂತಪ್ಪ ಸೇರಿದಂತೆ ಸ್ಪರ್ಧಾರ್ಥಿಗಳು ಭಾಗವಹಿಸಿದ್ದರು.

ಸ್ನಾತಕ ವಿದ್ಯಾರ್ಥಿಗಳು ವಿಶ್ವದ ಸಮಸ್ಯೆಗಳಿಗೆ ಸಹಕಾರ ತತ್ವಮಾತ್ರವೇ ಪರಿಹಾರ ನೀಡಬಲ್ಲದು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಬಡತನ ನಿವಾರಣೆ ಮತ್ತು ನಿರುದ್ಯೋಗ ಸಮಸ್ಯೆಗೆ ಸಹಕಾರ ತತ್ವವೇ ಪರಿಹಾರ ಎಂಬ ವಿಷಯಗಳ ಕುರಿತು ಪರ ಮತ್ತು ವಿರೋಧವಾಗಿ ಮಾತನಾಡಿದರು.

ಸ್ನಾತಕ ವಿಭಾಗದ ವಿಜೇತರು:

ಶ್ರೀ ಮುರುಘರಾಜೇಂದ್ರ ಸ್ವಾಮೀಜಿ ಬಿ.ಎಡ್. ಕಾಲೇಜಿನ ರೇವಣಸಿದ್ದಪ್ಪ ಪೂಜಾರಿ (ಪರವಾದ) ಪ್ರಥಮ ಸ್ಥಾನ, ಹಮೀದ್ ಪಿಯಾರೆ ಬಿ.ಎಡ್. ಕಾಲೇಜಿನ ತಿಮ್ಮಪ್ಪ ಟಿ. ದ್ವಿತೀಯ ಸ್ಥಾನ ಹಾಗೂ ರ್‍ಯನ್ ಬಿ.ಎಡ್. ಕಾಲೇಜಿನ ಐಶ್ವರ್ಯ ತೃತೀಯ ಸ್ಥಾನ ಪಡೆದರು.

ವಿರೋಧವಾದ ವಿಭಾಗದಲ್ಲಿ ಹಮೀದ್ ಪಿಯಾರೆ ಬಿ.ಎಡ್. ಕಾಲೇಜಿನ ಮಲ್ಲಿಕಾರ್ಜುನ ಪ್ರಥಮ ಸ್ಥಾನ, ಅದೇ ಕಾಲೇಜಿನ ಶಶಿಧರ್ ದ್ವಿತೀಯ ಸ್ಥಾನ ಹಾಗೂ ರ್‍ಯನ್ ಬಿ.ಎಡ್. ಕಾಲೇಜಿನ ಹರೀಶಕುಮಾರ್ ತೃತೀಯ ಸ್ಥಾನ ಪಡೆದರು.

ಸ್ನಾತಕೋತ್ತರ ವಿಭಾಗದ ವಿಜೇತರು :

ಗುಲಬರ್ಗಾ ವಿಶ್ವವಿದ್ಯಾಲಯದ ಇತಿಹಾಸ ವಿಭಾಗದ ವಿದ್ಯಾರ್ಥಿ ಅಣವೀರಪ್ಪ ಪರವಾದದಲ್ಲಿ ಪ್ರಥಮ ಸ್ಥಾನ ಪಡೆದರು. ಶ್ರೀ ಮುರುಘರಾಜೇಂದ್ರ ಸ್ವಾಮೀಜಿ ಕಾಲೇಜಿನ ವಿದ್ಯಾರ್ಥಿನಿ ಭಾಗ್ಯಶ್ರೀ ದ್ವಿತೀಯ ಸ್ಥಾನ ಗಳಿಸಿದರು. ಕಾರ್ಯಕ್ರಮದಲ್ಲಿ ಅತಿಥಿ ಗಣ್ಯರು ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು.

ಪ್ರತಿ ಟನ್ ಕಬ್ಬಿಗೆ 5,500 ಬೆಂಬಲ ಬೆಲೆ ನೀಡುವಂತೆ ಆಗ್ರಹಿಸಿ ರೈತರಿಂದ ಪ್ರತಿಭಟನೆ



ಕಲಬುರಗಿ,

ಪ್ರತಿ ಟನ್ ಕಬ್ಬಿಗೆ 5,500 ಬೆಂಬಲ ಬೆಲೆ ನಿಗದಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಕೂಡಲೇ ಪೂರೈಸಬೇಕು ಎಂದು ಆಗ್ರಹಿಸಿ ನಗರದ ಜೇವರ್ಗಿ ರಸ್ತೆಯ ವಾಲ್ಮೀಕಿ ವೃತ್ತದಲ್ಲಿ ವಿವಿಧ ರೈತಪರ ಸಂಘಟನೆಗಳ ಮುಖಂಡರು ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ರಾಜ್ಯ ಸರ್ಕಾರ ಕಬ್ಬು ಬೆಳೆಗಾರರಿಗೆ ಪ್ರತಿ ಟನ್‌ಗೆ 1,000 ಹೆಚ್ಚುವರಿ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ನೀಡಬೇಕು. ಡಾ. ಎಂ.ಎಸ್. ಸ್ವಾಮಿನಾಥನ್ ಆಯೋಗದ ವರದಿಯಂತೆ ಉತ್ಪಾದನಾ ವೆಚ್ಚದ ಶೇ. 50ರಷ್ಟು ಲಾಭ ಸೇರಿಸಿ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನಿಗದಿಪಡಿಸುವ ಕಾನೂನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿ ಕ್ವಿಂಟಾಲ್ ತೊಗರಿಗೆ 15,000 ಬೆಂಬಲ ಬೆಲೆ ಘೋಷಿಸಬೇಕು. ರೈತರ ಕೃಷಿ ಸಾಲವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೇ. 50ರ ಅನುಪಾತದಲ್ಲಿ ಮನ್ನಾ ಮಾಡಬೇಕು. ಬ್ಯಾಂಕ್‌ಗಳು ಕೃಷಿ ಸಾಲ ವಸೂಲಾತಿ ಮಾಡುವುದನ್ನು ತಡೆಹಿಡಿಯಬೇಕು ಎಂದು ರೈತರು ಆಗ್ರಹಿಸಿದರು.

ಕೃಷಿಗೆ ಮೊದಲ ಆದ್ಯತೆ ನೀಡಿ, ಸರ್ಕಾರ ಭರವಸೆ ನೀಡಿರುವಂತೆ ಕೃಷಿ ಪಂಪ್‌ಸೆಟ್‌ಗಳಿಗೆ ಕನಿಷ್ಠ ಏಳು ಗಂಟೆಗಳ ಕಾಲ ವಿದ್ಯುತ್ ಪೂರೈಸಬೇಕು. ಕೆರೆ-ಕಟ್ಟೆಗಳನ್ನು ನೀರಿನಿಂದ ತುಂಬಿಸಬೇಕು. ಬೆಳೆ ನಷ್ಟಕ್ಕೆ ವೈಜ್ಞಾನಿಕವಾಗಿ ಪರಿಹಾರ ನಿಗದಿಪಡಿಸಿ ರೈತರಿಗೆ ಸಮರ್ಪಕ ಪರಿಹಾರ ನೀಡಬೇಕು. ವಿಮಾ ಕಂಪನಿಗಳು ಬೆಳೆ ನಷ್ಟದ ಸಂಪೂರ್ಣ ಪರಿಹಾರವನ್ನು ರೈತರ ಖಾತೆಗಳಿಗೆ ಜಮಾ ಮಾಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ವಿಜಯಕುಮಾರ್ ಬಿರಾದಾರ, ಕರೆಪ್ಪ ಕರಗೊಂಡ, ಸಿದ್ದು ಎಸ್.ಎಲ್., ಪಿಡ್ಡಪ್ಪ ಜಾಲಗಾರ, ಮಹಾಂತಗೌಡ ನಂದಿಹಳ್ಳಿ, ಸಿದ್ರಾಮಯ್ಯ ಹಿರೇಮಠ, ಶಂಕರ ಉಮಾಶೆಟ್ಟಿ, ಸಾತಲಿಂಗಪ್ಪ ನೀಲೂರ, ಈರಣ್ಣ ಅಂಬಾಜಿ, ಶರಣಪ್ಪ ಹಾಳಮಳ್ಳಿ, ಶಿವರಾಜ್ ಪಾಟೀಲ್ ನಂದಿಕೂರ, ನಾಗರಾಜ ಮೇಲಕುಂದಾ, ಗಿರೆಪ್ಪಗೌಡ ಮಾಲಿಪಾಟೀಲ, ನಿಂಗಣ್ಣ ಕಣ್ಣಿ, ಆನಂದ ಕರಿಕಲ್, ಪ್ರತಿಭಾ ಹಿರೇಮಠ, ಸರ್ದಾರ್ ರಾಯಪ್ಪ, ಸಂತೋಷ್ ಪಾಟೀಲ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.



ಭ್ರಷ್ಟಾಚಾರ ನಿರ್ಮೂಲನೆಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು: ಡಾ.ರೂಕೀಯ ಆಸ್ನಾ ರಬಾ

ಕಲಬುರಗಿ :

ಭ್ರಷ್ಟಾಚಾರವು ದೇಶದ ಆರ್ಥಿಕ, ರಾಜಕೀಯ ಹಾಗೂ ಸಾಮಾಜಿಕ ಅಭಿವೃದ್ಧಿಗೆ ಪ್ರಮುಖ ಅಡಚಣೆಯಾಗಿದೆ. ಇದರ ನಿರ್ಮೂಲನೆಗೆ ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯ ಸೇರಿದಂತೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಜಿಮ್ಸ್ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸ ಕರು ಹಾಗೂ ಅಧೀಕ್ಷಕಿ ಡಾ. ರೂಕೀಯ ಆಸ್ನಾ ರಬಾ ಹೇಳಿದರು.

ನಗರದ ಜಿಮ್ಸ್ ಜಿಲ್ಲಾ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮದ ನೇತೃತ್ವ ವಹಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ನಾಗರಿಕರೂ ಜಾಗೃತರಾಗಿದ್ದು, ಜೀವನದ ಎಲ್ಲ ಕ್ಷೇತ್ರಗಳಲ್ಲೂ ಪ್ರಾಮಾಣಿಕತೆ, ನಿಷ್ಠೆ ಹಾಗೂ ಕಾನೂನಿನ ನಿಯಮಗಳನ್ನು ಪಾಲಿಸಬೇಕು. ಭ್ರಷ್ಟಾಚಾರದ ವಿರುದ್ಧದ ಹೋರಾಟಕ್ಕೆ ಸಕ್ರಿಯವಾಗಿ ಬೆಂಬಲ ನೀಡಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಚನ್ನಮಲ್ಲಪ್ಪ ಅವರು ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾವಿಧಿ ಬೋಧಿಸಿದರು. ಲಂಚ ಪಡೆಯುವುದಿಲ್ಲ, ನೀಡುವುದಿಲ್ಲ, ಎಲ್ಲ ಕಾರ್ಯಗಳನ್ನು ಪ್ರಾಮಾಣಿಕವಾಗಿ ಹಾಗೂ ಪಾರದರ್ಶಕವಾಗಿ ನಿರ್ವಹಿಸುತ್ತೇನೆ. ಸಾರ್ವಜನಿಕ ಹಿತಾಸಕ್ತಿಗೆ ಆದ್ಯತೆ ನೀಡುತ್ತೇನೆ. ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವುದರ ಜತೆಗೆ ಭ್ರಷ್ಟಾಚಾರದ ಘಟನೆಗಳು ಕಂಡುಬಂದಲ್ಲಿ ಸಂಬಂಧಿಸಿದ ಸಂಸ್ಥೆಗಳಿಗೆ ವರದಿ ಮಾಡುತ್ತೇನೆ ಎಂದು ಆಸ್ಪತ್ರೆಯ ಸಿಬ್ಬಂದಿ ಪ್ರತಿಜ್ಞೆ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಒಪಿಡಿ ಸರ್ಜನ್ ಡಾ. ಶಾಲಿನಿ ಸಜ್ಜನಶೆಟ್ಟಿ, ಸ್ಥಳೀಯ ವೈದ್ಯಾಧಿಕಾರಿಗಳಾದ ಡಾ. ಜಯಮ್ಮ ಎಸ್. ಗಣಜಲಖೇಡ್, ಡಾ. ಸಂತೋಷ ಕಟ್ಟಿಮನಿ, ಆಡಳಿತಾಧಿಕಾರಿ ಅಂಬಾರಾಯ ಸಂಕಾ, ಪ್ರಥಮ ದರ್ಜೆ ಸಹಾಯಕಿಯರಾದ ಕಾವ್ಯ ಅಂಜುಟಗಿ, ಶೀಬಾ ರಾಣಿ, ಜಿಲ್ಲಾ ತಂಬಾಕು ವ್ಯಸನಮುಕ್ತ ಕೇಂದ್ರದ ಮನೋವೈದ್ಯಕೀಯ ಸಲಹೆಗಾರ ಮಂಜುನಾಥ ಕಂಬಾಳಿಮಠ, ಗಣಕ ಸಹಾಯಕಿಯರಾದ ಪಾರ್ವತಿ ಭೀಮರಾವ್, ಸುರೇಖಾ ದಿವಟಗಿ ಸೇರಿದಂತೆ ಆಸ್ಪತ್ರೆಯ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿ ಉಪಸ್ಥಿತರಿದ್ದರು.



ಕಬ್ಬಿಗೆ 5,500ರೂ. ಬೆಂಬಲ ಬೆಲೆ ನೀಡುವಂತೆ ರೈತ ಸಂಘಟನೆಗಳಿಂದ ಅಫಜಲಪುರ ಬಂದ್

ಕಲಬುರಗಿ:

ಕಬ್ಬಿಗೆ ಪ್ರತಿ ಟನ್‌ಗೆ 5,500 ನ್ಯಾಯಸಮ್ಮತ ಬೆಂಬಲ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ವಿವಿಧ ರೈತ ಸಂಘಟನೆಗಳು ಅಫಜಲಪುರ ಪಟ್ಟಣದಲ್ಲಿ ಮುಂಜಾನೆ 9ಗಂಟೆಗೆ ಬಂದ್‌ಗೆ ಕರೆ ನೀಡಿದ ಹಿನ್ನೆಲೆಯಲ್ಲಿ ಜನಜೀವನ ಬಹುತೇಕ ಸ್ಥಗಿತಗೊಂಡಿದೆ. ರೈತ ಸಂಘಟನೆಗಳ ಬಂದ್ ಕರೆಗೆ ಪಟ್ಟಣದ ವ್ಯಾಪಾರಸ್ಥರು ಸ್ವಯಂಪ್ರೇರಿತವಾಗಿ ಸ್ಪಂದಿಸಿ ಅಂಗಡಿ-ಮುಂಗಟ್ಟುಗಳನ್ನು ಮುಚ್ಚುವ ಮೂಲಕ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ್ದರು.

ಅಫಜಲಪುರ ಪಟ್ಟಣದ ಪ್ರಮುಖ ರಸ್ತೆಗಳು ಬಿಕೋ ಎನ್ನುತ್ತಿದ್ದರೆ, ವ್ಯಾಪಾರ ವಹಿವಾಟು ಸಂಪೂರ್ಣ ಸ್ಥಗಿತಗೊಂಡಿತ್ತು.

ಕಬ್ಬು ಬೆಳೆಗಾರರಿಗೆ ನ್ಯಾಯಯುತ ಬೆಲೆ ನೀಡಬೇಕು, 8.5 ರಿಕವರಿ ಆಧಾರದ ಮೇಲೆ ಬೆಲೆ ನಿಗದಿಪಡಿಸಬೇಕು ಹಾಗೂ ರಾಜ್ಯ ಸರಕಾರ ರೈತರ ಬೇಡಿಕೆಗಳನ್ನು ತಕ್ಷಣ ಈಡೇರಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಬಂದ್ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ರೈತ ಸಂಘಟನೆಗಳ ಮುಖಂಡರು ಸರಕಾರ ಶೀಘ್ರವೇ ರೈತರ ಬೇಡಿಕೆಗಳನ್ನು ಈಡೇರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ಎಚ್ಚರಿಕೆ ನೀಡಿದ್ದಾರೆ.

ಸುಳ್ಳು ಸುದ್ದಿಗಳಿಂದ ಆಡಳಿತ ವ್ಯವಸ್ಥೆ ಬದಲಿಸಲು ಸಾಧ್ಯವಿಲ್ಲ: ಛಲವಾದಿ ನಾರಾಯಣಸ್ವಾಮಿ



ಶಹಾಪುರ:

ಸುಳ್ಳು ಸುದ್ದಿಗಳನ್ನು ಹರಡುವ ಮೂಲಕ ದೇಶದ ಆಡಳಿತ ವ್ಯವಸ್ಥೆಯನ್ನು ಬದಲಾಯಿಸಲು ಸಾಧ್ಯವಿಲ್ಲ. ದೇಶದ ಸಕ್ರಮ ಮತದಾರರು ತಮ್ಮ ಮತದಾನದ ಮೂಲಕ ಸರ್ಕಾರವನ್ನು ಬದಲಾಯಿಸಬಹುದೇ ಹೊರತು, ಡಾ. ಬಿ.ಆರ್. ಅಂಬೇಡ್ಕರ್ ಅವರು ರೂಪಿಸಿದ ಸಂವಿಧಾನದ ಅಡಿಯಲ್ಲಿ ನಡೆಯುತ್ತಿರುವ ಆಡಳಿತ ವ್ಯವಸ್ಥೆಯನ್ನು ಬದಲಾಯಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ನಗರದಲ್ಲಿ ಬಿಜೆಪಿ ಮುಖಂಡ ಅಮೀನರಡ್ಡಿ ಯಾಳಗಿ ಅವರ ನಿವಾಸದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ

ಹಾಗೂ ಮಾಜಿ ಸಚಿವ, ರಾಜ್ಯ ಬಿಜೆಪಿ ಉಪಾಧ್ಯಕ್ಷ ಎನ್. ಮಹೇಶ್ ಅವರು ಜಂಟಿ ಪತ್ರಿಕಾಗೋಷ್ಠಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ, ನಕಲಿ ಜೆನ್ ಝೀಗಳ ಹೋರಾಟ ಹಾಗೂ ಆಡಳಿತ ವ್ಯವಸ್ಥೆ ಬದಲಾವಣೆಯ ಹೆಸರಿನಲ್ಲಿ ನೀಡಲಾಗುತ್ತಿರುವ ಹೇಳಿಕೆಗಳ ವಿರುದ್ಧ ವಾಗ್ದಾಳಿ ನಡೆಸಿದರು. ಇಂತಹ ಹೋರಾಟಗಾರರು ಕಾಂಗ್ರೆಸ್‌ನ ಅಸಲಿ ಮುಖಗಳಾಗಿದ್ದಾರೆ ಎಂದು ಆರೋಪಿಸಿದರು.

ಮಾಜಿ ಸಚಿವ ಎನ್.ಮಹೇಶ್ ಮಾತನಾಡಿ, ದೇಶದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಸಮರ್ಥಿಸಿಕೊಂಡರು. ಅಕ್ರಮ ನುಸುಳುಕೋರರನ್ನು ಮತದಾರರ ಪಟ್ಟಿಯಿಂದ ಹೊರಗಿಟ್ಟು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕು. ದೇಶದಲ್ಲಿ ಕಾಂಗ್ರೆಸ್ ಸೃಷ್ಟಿಸಲು ಹೊರಟಿದೆ ಎನ್ನಲಾದ ಅರಾಜಕತೆಯನ್ನು ತಡೆಯುವ ನಿಟ್ಟಿನಲ್ಲಿ ಜನರು ಜಾಗೃತರಾಗಬೇಕು ಎಂದು ಕರೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜಪ್ಪಗೌಡ ವಿಭೂತಿಹಳ್ಳಿ, ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಮಹೇಶರಡ್ಡಿ ಮುದ್ನಾಳ, ಮಾಜಿ ಜಿಲ್ಲಾಧ್ಯಕ್ಷ ಅಮೀನರಡ್ಡಿ ಯಾಳಗಿ, ಹಿರಿಯ ಮುಖಂಡ ಸಿದ್ದಣ್ಣಗೌಡ ವಡಿಗೇರಾ, ಉಪಾಧ್ಯಕ್ಷ ಬಸವರಾಜ ಸೊನ್ನದ, ಅಡಿವಪ್ಪ ಜಾಕಾ, ಪ್ರಧಾನ ಕಾರ್ಯದರ್ಶಿಗಳಾದ ಪರಶುರಾಮ ಕುರುಕುಂದಿ, ಶಿವರಾಜ ದೇಶಮುಖ, ಯಾದಗಿರಿ ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ ವಡಿಗೇರಾ, ತಿರುಪತಿರೆಡ್ಡಿ, ರಾಜಶೇಖರ ಗೂಗಲ್, ರಾಜುಗೌಡ ಉಕ್ಕಿನಾಳ, ಗುರು ಕಾಮ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ದಮನಕ್ಕೆ ಮಣಿಯದೆ ಪ್ರಜಾಪ್ರಭುತ್ವದ ಹಕ್ಕು ಗೆದ್ದ ಜಾಮಿಯಾ ಯುವಶಕ್ತಿ!

ಇಪ್ಪತ್ತು ವರ್ಷಗಳಿಂದ ಕಸಿದುಕೊಳ್ಳಲಾಗಿದ್ದ ವಿದ್ಯಾರ್ಥಿ ಸಂಘದ ಚುನಾವಣೆಯ ಹಕ್ಕನ್ನು ಮರಳಿ ಪಡೆಯಲು ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿದ್ಯಾರ್ಥಿಗಳು ನಡೆಸಿದ 18 ದಿನಗಳ ಹೋರಾಟ ಕೊನೆಗೂ ಫಲ ನೀಡಿದೆ. ವಿದ್ಯಾರ್ಥಿಗಳ ಈ ಜಯ ಕೇವಲ ಜಾಮಿಯಾದ ಗೆಲುವಲ್ಲ; ದೇಶದ ವಿಶ್ವವಿದ್ಯಾಲಯಗಳಲ್ಲಿ ಕುಗ್ಗುತ್ತಿರುವ ಪ್ರಜಾಸತ್ತಾತ್ಮಕ ಅವಕಾಶಗಳನ್ನು ಮರಳಿ ಪಡೆಯುವ ಹೋರಾಟಕ್ಕೂ ಸಂದಿರುವ ಜಯ.

ದೆಹಲಿಯ ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಇಡೀ ದೇಶಕ್ಕೆ ಮಹತ್ವದ ಸಂದೇಶ ನೀಡಿದ್ದಾರೆ. ಪ್ರಜಾಪ್ರಭುತ್ವದ ಹಕ್ಕುಗಳು ಯಾರದ್ದೋ ಕೊಡುಗೆಗಳಲ್ಲ, ಅವುಗಳನ್ನು ಉಳಿಸಿಕೊಳ್ಳಲು ಸಂಘಟಿತವಾಗಿ ಹೋರಾಡಬೇಕು ಎಂಬುದನ್ನು 18 ದಿನಗಳ ನಿರಂತರ ಹೋರಾಟದ ಮೂಲಕ ವಿದ್ಯಾರ್ಥಿಗಳ ಸಾಬೀತು ಮಾಡಿದ್ದಾರೆ.

ವಿದ್ಯಾರ್ಥಿಗಳ ಹೋರಾಟಕ್ಕೆ ಮಣಿದ ವಿಶ್ವವಿದ್ಯಾಲಯದ ಆಡಳಿತ ಮಂಡಳಿ, ಸುಮಾರು ಎರಡು ದಶಕಗಳಿಂದ ಸ್ಥಗಿತಗೊಂಡಿದ್ದ ವಿದ್ಯಾರ್ಥಿ ಸಂಘದ ಚುನಾವಣೆಗಳನ್ನು ಮರುಆರಂಭಿಸಲು ಲಿಖಿತ ಆದೇಶ ಹೊರಡಿಸಿದೆ. ಪ್ರತಿಭಟನೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ವಿರುದ್ಧದ ಶಿಸ್ತುಕ್ರಮ, ಅಮಾನತು ಹಾಗೂ ಕ್ಯಾಂಪಸ್ ಪ್ರವೇಶ ನಿಷೇಧಗಳನ್ನು ಹಿಂತೆಗೆದುಕೊಳ್ಳುವುದಾಗಿ ಪ್ರಕಟಿಸಿದೆ.

ಇದು ನಿಸ್ಸಂದೇಹವಾಗಿ ವಿದ್ಯಾರ್ಥಿಗಳ ಸಂಘಟಿತ ಹೋರಾಟಕ್ಕೆ ಸಂದಿರುವ ಮಹತ್ವದ ಯಶಸ್ಸು . ಆದರೆ, ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳು ತಮ್ಮದೇ ಪ್ರತಿನಿಧಿಗಳನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶಕ್ಕಾಗಿ 18 ದಿನಗಳ ಕಾಲ ಉಪವಾಸ ಸತ್ಯಾಗ್ರಹ ನಡೆಸಬೇಕಾದ ಪರಿಸ್ಥಿತಿ ಮತ್ತು ವಿಶ್ವವಿದ್ಯಾಲಯಗಳು ತಮ್ಮದೇ ವಿದ್ಯಾರ್ಥಿಗಳಿಗೆ ಪ್ರಜಾಸತ್ತಾತ್ಮಕ ಪ್ರತಿನಿಧಿತ್ವ ನೀಡಲು ನಿರಾಕರಿಸುತ್ತಿರುವುದರ ಬಗ್ಗೆ ನಾವು ಚಿಂತನೆ ನಡೆಸಬೇಕಿದೆ.

ಲಿಂಗ್ಡೋ ಸಮಿತಿಯ ಶಿಫಾರಸುಗಳ ಮೂಲ ಉದ್ದೇಶ ವಿದ್ಯಾರ್ಥಿ ಚುನಾವಣೆಗಳಲ್ಲಿ ಪಾರದರ್ಶಕತೆ, ನ್ಯಾಯಸಮ್ಮತ ಸ್ಪರ್ಧೆ ಮತ್ತು ಹೊಣೆಗಾರಿಕೆಯನ್ನು ಹೆಚ್ಚಿಸುವುದಾಗಿತ್ತು. ಆದರೆ, ಆ ಶಿಫಾರಸುಗಳ ಹೆಸರಿನಲ್ಲಿ ವಿದ್ಯಾರ್ಥಿಗಳ ಚುನಾವಣಾ ಹಕ್ಕನ್ನು ಅನಿರ್ದಿಷ್ಟಾವಧಿಗೆ ನಿರಾಕರಿಸಲಾಗಿತ್ತು. ಜಾಮಿಯಾ ವಿಶ್ವವಿದ್ಯಾಲಯದಲ್ಲೂ ವಿದ್ಯಾರ್ಥಿ ಸಂಘದ ಚುನಾವಣೆಗಳು 2006ರಿಂದ ಸ್ಥಗಿತಗೊಂಡಿದ್ದವು. ಅಲ್ಲಿಂದ ಇಲ್ಲಿಯವರೆಗೆ ಅನೇಕ ತಲೆಮಾರುಗಳ ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಬಂದು, ಶಿಕ್ಷಣ ಮುಗಿಸಿ ಹೊರಹೋಗಿದ್ದಾರೆ. ಆದರೆ, ತಮ್ಮ ಸಮಸ್ಯೆಗಳನ್ನು ಆಡಳಿತ ಮಂಡಳಿಯ ಮುಂದೆ ಅಧಿಕೃತವಾಗಿ ಪ್ರತಿನಿಧಿಸುವ ಚುನಾಯಿತ ವಿದ್ಯಾರ್ಥಿ ಸಂಘ ಅವರಿಗೆ ಇರಲಿಲ್ಲ.

ವಿದ್ಯಾರ್ಥಿಗಳ ಹಕ್ಕುಗಳನ್ನು ಕೇಳುವ, ವಸತಿ ನಿಲಯಗಳ ಸಮಸ್ಯೆಗಳನ್ನು ಪರಿಹರಿಸಲು ಒತ್ತಾಯಿಸುವ, ಗ್ರಂಥಾಲಯದ ಸೌಲಭ್ಯಗಳನ್ನು ಸುಧಾರಿಸುವ, ಶುಲ್ಕ ಹೆಚ್ಚಳವನ್ನು ಪ್ರಶ್ನಿಸುವ ಹಾಗೂ ವಿದ್ಯಾರ್ಥಿಗಳ ಮೇಲಿನ ಅನ್ಯಾಯದ ವಿರುದ್ಧ ಧ್ವನಿ ಎತ್ತುವ ಪ್ರಜಾಸತ್ತಾತ್ಮಕ ವ್ಯವಸ್ಥೆಯೇ ಅಲ್ಲಿ ಸ್ಥಗಿತಗೊಂಡಿತ್ತು.

ರಾಜಕೀಯದ ಹೆಸರಿನಲ್ಲಿ ನಡೆಯುವ ಅಕ್ರಮಗಳನ್ನು ತಡೆಯುವುದಕ್ಕೂ ವಿದ್ಯಾರ್ಥಿಗಳನ್ನು ರಾಜಕೀಯ ಪ್ರಕ್ರಿಯೆಯಿಂದಲೇ ದೂರವಿಡುವುದಕ್ಕೂ ಅಗಾಧ ವ್ಯತ್ಯಾಸವಿದೆ ಎಂಬುದನ್ನು ಅರಿತ ಜಾಮಿಯಾ ವಿದ್ಯಾರ್ಥಿಗಳು ಎಚ್ಚೆತ್ತುಕೊಂಡರು. ವಿದ್ಯಾರ್ಥಿ ಸಂಘದ ಚುನಾವಣೆಗಾಗಿ ಅಕ್ಟೋಬರ್ 12ರಂದು ವಿದ್ಯಾರ್ಥಿಗಳು ಧ್ವನಿ ಎತ್ತಿದರು. ಹೋರಾಟಕ್ಕೆ ಇಳಿದರು. ಉಪವಾಸ ಸತ್ಯಾಗ್ರಹ ನಡೆಸಿದರು. ಆಡಳಿತ ಮಂಡಳಿಯೊಂದಿಗೆ ಮಾತುಕತೆ ನಡೆಸಿದರು. ಅಸ್ಪಷ್ಟ ಭರವಸೆಗಳನ್ನು ತಿರಸ್ಕರಿಸಿದರು. ಅಕ್ಟೋಬರ್ 26ರಂದು ಆಡಳಿತ ಮಂಡಳಿ ಚುನಾವಣೆ ನಡೆಸುವುದಾಗಿ ಹೇಳಿದರೂ ದಿನಾಂಕ ನಿಗದಿಪಡಿಸಲಿಲ್ಲ. ವಿದ್ಯಾರ್ಥಿಗಳು ಆ ಭರವಸೆಯನ್ನು ಒಪ್ಪಿಕೊಳ್ಳಲಿಲ್ಲ. ಚುನಾವಣೆಯ ವೇಳಾಪಟ್ಟಿ ನಿಗದಿಯಾಗುವವರೆಗೂ ಹೋರಾಟ ಹಿಂತೆಗೆದುಕೊಳ್ಳುವುದಿಲ್ಲ ಎಂದು ಪಟ್ಟುಹಿಡಿದರು.

ಅಂತಿಮವಾಗಿ ಅಕ್ಟೋಬರ್ 29ರಂದು ಆಡಳಿತ ಮಂಡಳಿ ಮಣಿಯಿತು. 2027ರ ಮೇ 15ರೊಳಗೆ ವಿದ್ಯಾರ್ಥಿ ಸಂಘದ ಸಂವಿಧಾನವನ್ನು ಅನುಮೋದಿಸಿ ಜಾರಿಗೊಳಿಸಲು ಮತ್ತು ಜುಲೈ 16ರ ಸುಮಾರಿಗೆ ಆರಂಭವಾಗುವ ಮುಂದಿನ ಶೈಕ್ಷಣಿಕ ಅವಧಿಯ ಆರು ವಾರಗಳೊಳಗೆ ಚುನಾವಣೆ ನಡೆಸುವುದಾಗಿ ಲಿಖಿತ ಆದೇಶ ಹೊರಡಿಸಿದೆ.

ಅಂದಹಾಗೆ, ವಿದ್ಯಾರ್ಥಿಗಳ ಹೋರಾಟವನ್ನು ಮಾತುಕತೆಯ ಮೂಲಕ ಮೊದಲೇ ಬಗೆಹರಿಸಬಹುದಿತ್ತು. ಆದರೆ, ಆರಂಭದಲ್ಲಿ ಆಡಳಿತ ಮಂಡಳಿ ದಾರ್ಷ್ಟ್ಯ ಮೆರೆಯಿತು. ಪ್ರತಿಭಟನೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳ ವಿರುದ್ಧ ಶಿಸ್ತುಕ್ರಮಗಳು, ಅಮಾನತು ಹಾಗೂ ಕ್ಯಾಂಪಸ್ ಪ್ರವೇಶದ ನಿರ್ಬಂಧಗಳನ್ನು ಹೇರಿತು. ಭದ್ರತೆಯ ಕಾರಣ ನೀಡಿ ಗ್ರಂಥಾಲಯಗಳನ್ನು ಮುಚ್ಚಿತು. ತರಗತಿಗಳನ್ನು ಆನ್‌ಲೈನ್‌ಗೆ ವರ್ಗಾಯಿಸಿತು. ಕ್ಯಾಂಪಸ್ ಸುತ್ತಲೂ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿತು. ಇದೆಲ್ಲವೂ ಅಕ್ಷರಶಃ ಪ್ರಜಾಸತ್ತಾತ್ಮಕ ಶೈಕ್ಷಣಿಕ ಸಂಸ್ಕೃತಿಗೆ ವಿರುದ್ಧವಾದ ನಡೆ.

ದುರದೃಷ್ಟಕರವೆಂದರೆ, ವಿಶ್ವವಿದ್ಯಾಲಯಗಳು ತಮ್ಮ ಕರ್ತವ್ಯ-ಬಾಧ್ಯತೆಗಳನ್ನೇ ಮರೆತಿವೆ. ವಿದ್ಯಾರ್ಥಿಗಳಲ್ಲಿ ಸ್ವತಂತ್ರವಾಗಿ ಆಲೋಚಿಸುವ, ವಿಮರ್ಶಿಸುವ, ಪ್ರಶ್ನಿಸುವ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಅರಿಯುವ ನಾಗರಿಕರನ್ನಾಗಿ ರೂಪಿಸುವ ಜವಾಬ್ದಾರಿಯನ್ನು ಮರೆತಿವೆ. ಕೇವಲ ಪದವಿ ಪ್ರಮಾಣಪತ್ರಗಳನ್ನು ವಿತರಿಸುವ ಸಂಸ್ಥೆಗಳಾಗಿ ಬದಲಾಗುತ್ತಿವೆ. ಪ್ರಶ್ನೆ ಕೇಳುವ ವಿದ್ಯಾರ್ಥಿಗಳನ್ನೇ ಅನುಮಾನದಿಂದ ನೋಡುತ್ತಿವೆ.

ಆದರೆ, ಜಾಮಿಯಾ ವಿಶ್ವವಿದ್ಯಾಲಯವು ತನ್ನ ಐತಿಹಾಸಿಕ ಇತಿಹಾಸವನ್ನು ಮರೆತು, ಇತರ ವಿಶ್ವವಿದ್ಯಾಲಯಗಳಂತೆಯೇ ವರ್ತಿಸುತ್ತಿರುವುದು ಆಘಾತಕಾರಿ. ಯಾಕೆಂದರೆ, ಇದು ಬ್ರಿಟಿಷರ ಆಡಳಿತಕ್ಕೆ ಮಣಿಯದೆ ಸ್ವತಂತ್ರ ಶಿಕ್ಷಣ ಸಂಸ್ಥೆಯನ್ನು ಕಟ್ಟಲು ಮುಂದಾದವರ ಪರಂಪರೆಯನ್ನು ಹೊಂದಿದೆ. 1920ರಲ್ಲಿ ಬ್ರಿಟಿಷ್ ವಸಾಹತುಶಾಹಿಯ ವಿರುದ್ಧದ ಅಸಹಕಾರ ಚಳವಳಿಯ ಸಂದರ್ಭದಲ್ಲಿ ರೂಪುಗೊಂಡ ಈ ವಿಶ್ವವಿದ್ಯಾಲಯವು ಸ್ವಾತಂತ್ರ್ಯ, ರಾಷ್ಟ್ರೀಯತೆ, ಧಾರ್ಮಿಕ ಸೌಹಾರ್ದತೆ ಹಾಗೂ ಶಿಕ್ಷಣದ ಸ್ವಾಯತ್ತತೆಯ ಆಶಯಗಳನ್ನು ತನ್ನ ಅಡಿಪಾಯವಾಗಿಸಿಕೊಂಡಿತ್ತು.

ಇಂತಹ ಸಂಸ್ಥೆಯಲ್ಲಿ ವಿದ್ಯಾರ್ಥಿಗಳು ತಮ್ಮ ಪ್ರಜಾಸತ್ತಾತ್ಮಕ ಹಕ್ಕಿಗಾಗಿ ಹೋರಾಡಬೇಕಾಗಿ ಬಂದಿರುವುದು ಐತಿಹಾಸಿಕ ವೈರುಧ್ಯ. ಆದರೆ, ಜಾಮಿಯಾದ ವಿದ್ಯಾರ್ಥಿಗಳು ತಮ್ಮ ಸಂಸ್ಥೆಯ ಹೋರಾಟದ ಪರಂಪರೆಯನ್ನು ಮತ್ತೆ ಜೀವಂತಗೊಳಿಸಿದ್ದಾರೆ.

2019ರ ಡಿಸೆಂಬರ್‌ನಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆಯ ವಿರುದ್ಧ ನಡೆದ ಪ್ರತಿಭಟನೆಗಳ ಸಂದರ್ಭದಲ್ಲಿ ಜಾಮಿಯಾ ವಿದ್ಯಾರ್ಥಿಗಳು ಪೊಲೀಸ್ ದಮನವನ್ನು ಎದುರಿಸಿದ್ದರು. ಆ ಘಟನೆ ಭಾರತದ ವಿದ್ಯಾರ್ಥಿ ಚಳವಳಿಗಳ ಇತಿಹಾಸದಲ್ಲಿ ಮಹತ್ವದ ಸ್ಥಾನ ಪಡೆಯಿತು. ಈಗ, ವಿದ್ಯಾರ್ಥಿ ಸಂಘದ ಚುನಾವಣೆಗಾಗಿ ನಡೆದಿರುವ ಹೋರಾಟವು, ಜಾಮಿಯಾದ ವಿದ್ಯಾರ್ಥಿಗಳ ಪ್ರಶ್ನಿಸುವ ಮನೋಭಾವ ಮತ್ತು ಸಂಘಟನಾ ಶಕ್ತಿ ಮತ್ತಷ್ಟು ಜೀವಂತಗೊಳಿಸಿದೆ.

ಈ ಹೋರಾಟದಲ್ಲಿ ವಿದ್ಯಾರ್ಥಿನಿಯರ ನಾಯಕತ್ವದ ಮಹತ್ವವನ್ನು ಅಲ್ಲಗಳೆಯಲಾಗದು. ನೌಶೀನ್ ಫಾರೂಕ್, ಹನೀನಾ ಬಿಂತ್ ಉಮರ್ ಹಾಗೂ ರಿದಾ ನೌಶಾದ್ ಖಾನ್ ಅವರಂತಹ ವಿದ್ಯಾರ್ಥಿನಿಯರು ಹೋರಾಟದ ಸಂಘಟನೆ, ಜನಸಂಪರ್ಕ, ಪ್ರತಿಭಟನೆಯ ನಿರ್ವಹಣೆ ಹಾಗೂ ಉಪವಾಸ ಸತ್ಯಾಗ್ರಹದಲ್ಲಿ ಗಮನಾರ್ಹ ಪಾತ್ರ ವಹಿಸಿದ್ದಾರೆ.

ಈ ಮೂವರೂ ವಿದ್ಯಾರ್ಥಿನಿಯರು ಕೇವಲ ಪ್ರತಿಭಟನೆಯಲ್ಲಿ ಭಾಗವಹಿಸಿದವರಲ್ಲ. ಹೋರಾಟವನ್ನು ರೂಪಿಸಿದವರು, ಮುನ್ನಡೆಸಿದವರು ಹಾಗೂ ನಿರಂತರವಾಗಿ ಜೀವಂತವಾಗಿಟ್ಟವರು. ''ಮಹಿಳೆಯರು, ಅಲ್ಪಸಂಖ್ಯಾತರು ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ತಮ್ಮ ಸಮಸ್ಯೆಗಳನ್ನು ನಿರ್ಭಯವಾಗಿ ಪ್ರತಿಪಾದಿಸಲು ವಿದ್ಯಾರ್ಥಿ ಸಂಘ ಅಗತ್ಯ. ಅಂತೆಯೇ, ಅನ್ಯಾಯ ಕಂಡಾಗ ಪ್ರಶ್ನಿಸುವುದು ವಿದ್ಯಾರ್ಥಿಗಳ ಜವಾಬ್ದಾರಿ'' ಎಂಬುದನ್ನು ವಿಶ್ವವಿದ್ಯಾಲಯಗಳಿಗೆ ಸಾರಿ ಹೇಳಿದವರು.

ಜಾಮಿಯಾ ವಿದ್ಯಾರ್ಥಿಗಳು ಗೆದ್ದಿರುವುದು ವಿದ್ಯಾರ್ಥಿ ಸಂಘದ ಚುನಾವಣೆ ನಡೆಸುವ ಭರವಸೆಯನ್ನ ಮಾತ್ರವಲ್ಲ, ಪ್ರಶ್ನಿಸುವ ಹಕ್ಕನ್ನು ಹತ್ತಿಕ್ಕಲು ಸಾಧ್ಯವಿಲ್ಲ ಎಂಬ ವಿಶ್ವಾಸವನ್ನೂ ಗಳಿಸಿದ್ದಾರೆ. ವಿದ್ಯಾರ್ಥಿಗಳ ಧ್ವನಿಯನ್ನು ಅಡಗಿಸುವುದಲ್ಲ, ಆಲಿಸುವುದೇ ವಿಶ್ವವಿದ್ಯಾಲಯದ ಕರ್ತವ್ಯ ಎಂಬ ಸ್ಪಷ್ಟ ಸಂದೇಶವನ್ನೂ ನೀಡಿದ್ದಾರೆ.

ಸದ್ಯ, ಜಾಮಿಯಾ ಆಡಳಿತ ಮಂಡಳಿಯು ಚುನಾವಣೆ ನಡೆಸಲು ಲಿಖಿತ ಭರವಸೆ ನೀಡಿದೆ. ಚುನಾವಣೆಗಳು ಇನ್ನೂ ನಡೆದಿಲ್ಲ. ವಿದ್ಯಾರ್ಥಿ ಸಂಘದ ಸಂವಿಧಾನವೂ ಅಂತಿಮಗೊಂಡಿಲ್ಲ. ಆದ್ದರಿಂದ, ಆಡಳಿತ ಮಂಡಳಿ ತನ್ನ ಭರವಸೆಯನ್ನು ನಿಗದಿತ ಅವಧಿಯಲ್ಲಿ ಈಡೇರಿಸಬೇಕು. ವಿದ್ಯಾರ್ಥಿಗಳ ಪ್ರಾತಿನಿಧ್ಯದೊಂದಿಗೆ ಪಾರದರ್ಶಕವಾಗಿ ಚುನಾವಣಾ ನಿಯಮಗಳನ್ನು ರೂಪಿಸಬೇಕು. ಚುನಾವಣೆಯಲ್ಲಿ ಸ್ಪರ್ಧಿಸುವ ಮತ್ತು ಮತ ಚಲಾಯಿಸುವ ಅವಕಾಶಗಳು ಎಲ್ಲ ಅರ್ಹ ವಿದ್ಯಾರ್ಥಿಗಳಿಗೂ ಸಮಾನವಾಗಿ ದೊರೆಯಬೇಕು. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳ ವಿರುದ್ಧದ ಎಲ್ಲ ಶಿಸ್ತುಕ್ರಮಗಳನ್ನು ಕಟ್ಟುನಿಟ್ಟಾಗಿ ಹಿಂತೆಗೆದುಕೊಳ್ಳಬೇಕು.

ಇದೇ ಸಂದರ್ಭದಲ್ಲಿ, ಕರ್ನಾಟಕದಲ್ಲಿಯೂ ವಿದ್ಯಾರ್ಥಿ ಸಂಘದ ಚುನಾವಣೆಗಳಿಗೆ ಅವಕಾಶ ಕಲ್ಪಿಸುವ ನಿರ್ಧಾರ ಹೊರಬಂದಿದೆ. ಮಧ್ಯಪ್ರದೇಶ, ಮಹಾರಾಷ್ಟ್ರ ಹಾಗೂ ಒಡಿಶಾದಲ್ಲಿಯೂ ವಿದ್ಯಾರ್ಥಿ ಚುನಾವಣೆಗಳ ಮರುಸ್ಥಾಪನೆಯ ಕುರಿತ ಚರ್ಚೆಗಳು ನಡೆಯುತ್ತಿವೆ. ಈ ಸಂದರ್ಭದಲ್ಲಿ ಜಾಮಿಯಾದ ವಿದ್ಯಾರ್ಥಿಗಳ ಯಶಸ್ಸು ದೇಶವ್ಯಾಪಿ ವಿದ್ಯಾರ್ಥಿಗಳಿಗೆ ಹೊಸ ಬಲ ನೀಡಿದೆ.

ನ.1 ಕರ್ನಾಟಕ ರಾಜ್ಯೋತ್ಸವ ಮಾತ್ರವಲ್ಲ; ಭಾರತದ ನಕ್ಷೆಯನ್ನೇ ಬದಲಿಸಿದ ಐತಿಹಾಸಿಕ ದಿನ!



ನವೆಂಬರ್ 1 ಕನ್ನಡಿಗರ ಹೆಮ್ಮೆಯ ಕರ್ನಾಟಕ ರಾಜ್ಯೋತ್ಸವ. ಇದೇ ದಿನ ದೇಶದ ಎಂಟು ರಾಜ್ಯಗಳು ಮತ್ತು ಐದು ಕೇಂದ್ರಾಡಳಿತ ಪ್ರದೇಶಗಳ ರಚನೆ, ಮರುರಚನೆ ಹಾಗೂ ವಿಮೋಚನೆಯ ಇತಿಹಾಸವೂ ಇದೆ. ಭಾಷಾವಾರು ರಾಜ್ಯಗಳಿಗಾಗಿ ನಡೆದ ಜನಚಳವಳಿಗಳು, ಪ್ರಾದೇಶಿಕ ಅಸ್ಮಿತೆಯ ಹೋರಾಟಗಳು ಹಾಗೂ ವಸಾಹತುಶಾಹಿಯ ವಿರುದ್ಧದ ಸಂಘರ್ಷಗಳು ಈ ದಿನದ ವಿಶೇಷ ಮಹತ್ವವನ್ನು ಸಾರಿವೆ.

ನವೆಂಬರ್ 1 ಕನ್ನಡಿಗರಿಗೆ ಸಂಭ್ರಮದ ಕರ್ನಾಟಕ ರಾಜ್ಯೋತ್ಸವದ ದಿನ. ನಾಡಗೀತೆ, ಕನ್ನಡ ಬಾವುಟ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕನ್ನಡನಾಡಿನ ಇತಿಹಾಸವನ್ನು ಸ್ಮರಿಸುವ ಸಂಭ್ರಮ ಇಂದು ರಾಜ್ಯದಾದ್ಯಂತ ಮನೆ ಮಾಡಿದೆ. ಅಂದಹಾಗೆ, ಈ ದಿನದ ವಿಶೇಷತೆ ಕರ್ನಾಟಕಕ್ಕಷ್ಟೇ ಸೀಮಿತವಾಗಿಲ್ಲ. ಆಂಧ್ರಪ್ರದೇಶ, ಛತ್ತೀಸ್‌ಗಢ, ಹರಿಯಾಣ, ಕೇರಳ, ಮಧ್ಯಪ್ರದೇಶ, ಪಂಜಾಬ್ ಹಾಗೂ ತಮಿಳುನಾಡು ಸೇರಿದಂತೆ ಎಂಟು ರಾಜ್ಯಗಳ ರಚನೆ ಮರುರಚನೆಯ ಇತಿಹಾಸವೂ ಬೆಸೆದುಕೊಂಡಿದೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಚಂಡೀಗಢ, ದೆಹಲಿ, ಲಕ್ಷದ್ವೀಪ ಹಾಗೂ ಪುದುಚೇರಿ ಸೇರಿದಂತೆ ಐದು ಕೇಂದ್ರಾಡಳಿತ ಪ್ರದೇಶಗಳೂ ಇದೇ ದಿನ ಐತಿಹಾಸಿಕ ಮಹತ್ವ ಹೊಂದಿವೆ.

1956: ಭಾರತದ ರಾಜಕೀಯ ನಕ್ಷೆಯನ್ನೇ ಬದಲಿಸಿದ ವರ್ಷ

1947ರಲ್ಲಿ ಭಾರತ ಸ್ವಾತಂತ್ರ್ಯ ಪಡೆದಾಗ ಇಂದಿನಂತೆ ರಾಜ್ಯಗಳ ಗಡಿಗಳಿರಲಿಲ್ಲ. ಬ್ರಿಟಿಷರ ಆಡಳಿತದ ಪ್ರಾಂತ್ಯಗಳು, ರಾಜಮನೆತನಗಳ ಸಂಸ್ಥಾನಗಳು ಹಾಗೂ ವಿವಿಧ ಆಡಳಿತ ಪ್ರದೇಶಗಳು ಸೇರಿ ಭಾರತ ರೂಪುಗೊಂಡಿತ್ತು. ಆದರೆ, ಈ ಗಡಿಗಳು ಜನರ ಭಾಷೆ ಮತ್ತು ಸಂಸ್ಕೃತಿಗೆ ಅನುಗುಣವಾಗಿರಲಿಲ್ಲ.

ಕನ್ನಡಿಗರು ಬೇರೆಬೇರೆ ಆಡಳಿತ ಪ್ರದೇಶಗಳಲ್ಲಿ ಹಂಚಿಹೋಗಿದ್ದರು. ತೆಲುಗು, ಮಲಯಾಳಂ ಹಾಗೂ ಇತರ ಭಾಷಿಕರೂ ಇದೇ ಪರಿಸ್ಥಿತಿಯನ್ನು ಎದುರಿಸುತ್ತಿದ್ದರು. ಹೀಗಾಗಿ ತಮ್ಮ ಭಾಷೆಯಲ್ಲಿ ಆಡಳಿತ, ಶಿಕ್ಷಣ ಹಾಗೂ ಸಾಂಸ್ಕೃತಿಕ ಅಸ್ಮಿತೆಗೆ ಮಾನ್ಯತೆ ನೀಡಬೇಕೆಂಬ ಬೇಡಿಕೆಗಳು ಬಲಗೊಂಡವು.

ತೆಲುಗು ಭಾಷಿಕರ ಪ್ರತ್ಯೇಕ ರಾಜ್ಯದ ಹೋರಾಟ ಇದರಲ್ಲಿ ಮಹತ್ವದ ಪಾತ್ರ ವಹಿಸಿತು. ಪೊಟ್ಟಿ ಶ್ರೀರಾಮುಲು ಅವರ ಉಪವಾಸ ಸತ್ಯಾಗ್ರಹ ಮತ್ತು 1952ರಲ್ಲಿ ಅವರ ನಿಧನದ ನಂತರ ಪ್ರತ್ಯೇಕ ಆಂಧ್ರ ರಾಜ್ಯದ ಬೇಡಿಕೆ ತೀವ್ರಗೊಂಡಿತು. ಪರಿಣಾಮ, 1953ರ ಅಕ್ಟೋಬರ್ 1ರಂದು ಆಂಧ್ರ ರಾಜ್ಯ ರಚನೆಯಾಯಿತು.

ಇದರ ಬೆನ್ನಲ್ಲೇ ಕೇಂದ್ರ ಸರ್ಕಾರ ಫಜಲ್ ಅಲಿ ಅವರ ಅಧ್ಯಕ್ಷತೆಯಲ್ಲಿ ರಾಜ್ಯಗಳ ಮರುವಿಂಗಡನಾ ಆಯೋಗವನ್ನು ರಚಿಸಿತು. ಆಯೋಗದ ಶಿಫಾರಸುಗಳ ಆಧಾರದಲ್ಲಿ 1956ರ ರಾಜ್ಯಗಳ ಮರುವಿಂಗಡನಾ ಕಾಯ್ದೆ ಜಾರಿಗೆ ಬಂದಿತು.

1956ರ ನವೆಂಬರ್ 1ರಂದು ಭಾರತದ ಆಡಳಿತಾತ್ಮಕ ನಕ್ಷೆಯಲ್ಲಿ ಮಹತ್ವದ ಬದಲಾವಣೆಗಳಾದವು. ದೇಶವು 14 ರಾಜ್ಯಗಳು ಮತ್ತು ಆರು ಕೇಂದ್ರಾಡಳಿತ ಪ್ರದೇಶಗಳೊಂದಿಗೆ ಮರರಚನೆಯಾಯಿತು.

ಕರ್ನಾಟಕ: ಕನ್ನಡಿಗರ ಏಕೀಕರಣದ ಕನಸು ನನಸಾದ ದಿನ

ಕರ್ನಾಟಕದ ಇಂದಿನ ಸ್ವರೂಪ ದಶಕಗಳ ಕನ್ನಡ ಏಕೀಕರಣ ಚಳವಳಿಯ ಫಲವಾಗಿದೆ. ಸ್ವಾತಂತ್ರ್ಯಕ್ಕೂ ಮೊದಲು ಕನ್ನಡ ಭಾಷಿಕ ಪ್ರದೇಶಗಳು ಮೈಸೂರು ಸಂಸ್ಥಾನ, ಬಾಂಬೆ ಪ್ರಾಂತ್ಯ, ಹೈದರಾಬಾದ್ ನಿಜಾಮರ ಆಡಳಿತ, ಮದ್ರಾಸ್ ಪ್ರಾಂತ್ಯ ಹಾಗೂ ಕೊಡಗು ಸೇರಿದಂತೆ ವಿವಿಧ ಭಾಗಗಳಲ್ಲಿ ಹಂಚಿಹೋಗಿದ್ದವು.

ಅಂತಹ ಪರಿಸ್ಥಿತಿಯಲ್ಲಿ ಕರ್ನಾಟಕದ ಏಕೀಕರಣಕ್ಕಾಗಿ ಆಲೂರು ವೆಂಕಟರಾಯರಂತಹ ನಾಯಕರು, ಸಾಹಿತಿಗಳು ಮತ್ತು ಕನ್ನಡಪರ ಸಂಘಟನೆಗಳು ಹೋರಾಟ ನಡೆಸಿದವು. ಎಲ್ಲದರ ಫಲವಾಗಿ, 1956ರ ನವೆಂಬರ್ 1ರಂದು ಕನ್ನಡ ಭಾಷಿಕ ಪ್ರದೇಶಗಳನ್ನು ಒಗ್ಗೂಡಿಸಿ ವಿಶಾಲ ಮೈಸೂರು ರಾಜ್ಯವನ್ನು ರಚಿಸಲಾಯಿತು. ಆದರೆ, ಈ ರಾಜ್ಯಕ್ಕೆ ಕರ್ನಾಟಕ ಎಂಬ ಹೆಸರು ಬಂದದ್ದು 1973ರ ನವೆಂಬರ್ 1ರಂದು.

2026ಕ್ಕೆ ಕನ್ನಡ ಭಾಷಿಕ ಪ್ರದೇಶಗಳ ಏಕೀಕರಣವಾಗಿ 70 ವರ್ಷಗಳು ಪೂರ್ಣಗೊಂಡಿವೆ. ಈ ಸಂಭ್ರಮದ ಜೊತೆಗೆ ಪ್ರಾದೇಶಿಕ ಅಸಮಾನತೆ, ಕನ್ನಡ ಮಾಧ್ಯಮ ಶಿಕ್ಷಣ ಹಾಗೂ ಸ್ಥಳೀಯ ಉದ್ಯೋಗಾವಕಾಶಗಳ ಕುರಿತು ಆತ್ಮಾವಲೋಕನದ ಅಗತ್ಯವೂ ಇದೆ.

ಕೇರಳ: ಮಲಯಾಳಂ ಭಾಷಿಕರ ಏಕೀಕರಣ

ಕರ್ನಾಟಕದಂತೆಯೇ ಕೇರಳವೂ 1956ರ ನವೆಂಬರ್ 1ರಂದು ಅಸ್ತಿತ್ವಕ್ಕೆ ಬಂದಿತು. ಈ ದಿನವನ್ನು ಅಲ್ಲಿ ಕೇರಳ ಪಿರವಿ ಎಂದು ಆಚರಿಸಲಾಗುತ್ತದೆ.

ಈ ಹಿಂದೆ ಮಲಯಾಳಂ ಭಾಷಿಕ ಪ್ರದೇಶಗಳು ತಿರುವಾಂಕೂರು, ಕೊಚ್ಚಿನ್ ಹಾಗೂ ಮದ್ರಾಸ್ ಪ್ರಾಂತ್ಯದ ಮಲಬಾರ್ ಪ್ರದೇಶಗಳಲ್ಲಿ ಹಂಚಿಹೋಗಿದ್ದವು. ಭಾಷಾವಾರು ಮರುರಚನೆಯ ಸಂದರ್ಭದಲ್ಲಿ ಈ ಪ್ರದೇಶಗಳನ್ನು ಒಗ್ಗೂಡಿಸಿ ಕೇರಳ ರಾಜ್ಯ ರಚಿಸಲಾಯಿತು.

ಅದೇ ಸಮಯದಲ್ಲಿ ತಮಿಳು ಭಾಷಿಕ ಕನ್ಯಾಕುಮಾರಿ ಪ್ರದೇಶವನ್ನು ಮದ್ರಾಸ್ ರಾಜ್ಯಕ್ಕೆ ಸೇರಿಸಲಾಯಿತು. ನಂತರದ ದಶಕಗಳಲ್ಲಿ ಶಿಕ್ಷಣ, ಆರೋಗ್ಯ, ಭೂಸುಧಾರಣೆ ಹಾಗೂ ಸಾಮಾಜಿಕ ಕಲ್ಯಾಣದ ಮೂಲಕ ಕೇರಳ ತನ್ನದೇ ಆದ ಅಭಿವೃದ್ಧಿ ಮಾದರಿಯನ್ನು ರೂಪಿಸಿಕೊಂಡಿತು.

ಆಂಧ್ರಪ್ರದೇಶ: ಏಕೀಕರಣ ಮತ್ತು ತೆಲಂಗಾಣ ವಿಭಜನೆ

ಆಂಧ್ರಪ್ರದೇಶದ ಇತಿಹಾಸವು ಭಾಷಾವಾರು ರಾಜ್ಯಗಳ ಹೋರಾಟದೊಂದಿಗೆ ನೇರ ಸಂಬಂಧ ಹೊಂದಿದೆ. 1953ರಲ್ಲಿ ರಚನೆಯಾಗಿದ್ದ ಆಂಧ್ರ ರಾಜ್ಯವನ್ನು, 1956ರ ನವೆಂಬರ್ 1ರಂದು ಹಿಂದಿನ ಹೈದರಾಬಾದ್ ರಾಜ್ಯದ ತೆಲುಗು ಭಾಷಿಕ ತೆಲಂಗಾಣ ಪ್ರದೇಶದೊಂದಿಗೆ ವಿಲೀನಗೊಳಿಸಿ ಆಂಧ್ರಪ್ರದೇಶ ರಚಿಸಲಾಯಿತು.

ಆದರೆ, ಒಂದೇ ಭಾಷೆ ಮಾತನಾಡುವ ಜನರ ನಡುವೆ ಪ್ರಾದೇಶಿಕ ಅಭಿವೃದ್ಧಿ, ಉದ್ಯೋಗ, ನೀರಾವರಿ ಹಾಗೂ ಸಂಪನ್ಮೂಲಗಳ ಹಂಚಿಕೆಯ ಕುರಿತು ಅಸಮಾನತೆಗಳು ಮುಂದುವರಿದವು.

ಈ ಹಿನ್ನೆಲೆಯಲ್ಲಿ ಪ್ರತ್ಯೇಕ ತೆಲಂಗಾಣ ಚಳವಳಿ ಬಲಗೊಂಡು, 2014ರ ಜೂನ್ 2ರಂದು ತೆಲಂಗಾಣ ಪ್ರತ್ಯೇಕ ರಾಜ್ಯವಾಯಿತು.

ತಮಿಳುನಾಡು: ಎರಡು ಐತಿಹಾಸಿಕ ದಿನಗಳ ವಿಶೇಷತೆ

ತಮಿಳುನಾಡಿನ ಇತಿಹಾಸದಲ್ಲಿಯೂ 1956ರ ನವೆಂಬರ್ 1 ಮಹತ್ವದ್ದು. ಅಂದು ಭಾಷಾವಾರು ಮರುರಚನೆಯ ಮೂಲಕ ಮದ್ರಾಸ್ ರಾಜ್ಯದ ಗಡಿಗಳನ್ನು ಬದಲಾಯಿಸಲಾಯಿತು. ಆದರೆ, ಆಗ ರಾಜ್ಯಕ್ಕೆ ತಮಿಳುನಾಡು ಎಂಬ ಹೆಸರಿರಲಿಲ್ಲ. ದ್ರಾವಿಡ ಚಳವಳಿ ಮತ್ತು ತಮಿಳು ಭಾಷಾ ಅಸ್ಮಿತೆಯ ಹೋರಾಟಗಳ ಪರಿಣಾಮವಾಗಿ 1967ರ ಜುಲೈ 18ರಂದು ಮದ್ರಾಸ್ ರಾಜ್ಯವನ್ನು ತಮಿಳುನಾಡು ಎಂದು ಮರುನಾಮಕರಣ ಮಾಡುವ ನಿರ್ಣಯವನ್ನು ವಿಧಾನಸಭೆ ಅಂಗೀಕರಿಸಿತು. 1969ರಲ್ಲಿ ಹೆಸರು ಬದಲಾವಣೆ ಕಾನೂನಾತ್ಮಕವಾಗಿ ಜಾರಿಗೆ ಬಂತು.

ಹೀಗಾಗಿ, ನವೆಂಬರ್ 1 ಭಾಷಾವಾರು ಗಡಿ ಮರುರಚನೆಯ ದಿನವಾದರೆ, ಜುಲೈ 18 ತಮಿಳುನಾಡು ಎಂಬ ಹೆಸರಿನ ನಿರ್ಣಯಕ್ಕೆ ಸಂಬಂಧಿಸಿದ ದಿನವಾಗಿದೆ. ರಾಜ್ಯದಲ್ಲಿ ಈ ಎರಡೂ ದಿನಗಳ ಐತಿಹಾಸಿಕ ಮಹತ್ವವನ್ನು ಸ್ಮರಿಸಲಾಗುತ್ತದೆ.

ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢ: ಒಂದೇ ದಿನದ ಎರಡು ಇತಿಹಾಸಗಳು

1956ರ ನವೆಂಬರ್ 1ರಂದು ಹಿಂದಿನ ಮಧ್ಯಪ್ರದೇಶ, ಮಧ್ಯಭಾರತ, ವಿಂಧ್ಯಪ್ರದೇಶ ಹಾಗೂ ಭೋಪಾಲ್ ಸೇರಿದಂತೆ ವಿವಿಧ ಆಡಳಿತ ಪ್ರದೇಶಗಳನ್ನು ಮರುಸಂಘಟಿಸಿ ಹೊಸ ಮಧ್ಯಪ್ರದೇಶ ರಾಜ್ಯವನ್ನು ರೂಪಿಸಲಾಯಿತು.

ನಂತರ, 2000ರ ನವೆಂಬರ್ 1ರಂದು ಮಧ್ಯಪ್ರದೇಶದಿಂದ ಛತ್ತೀಸ್‌ಗಢವನ್ನು ಪ್ರತ್ಯೇಕಿಸಿ ಭಾರತದ 26ನೇ ರಾಜ್ಯವನ್ನಾಗಿ ರಚಿಸಲಾಯಿತು. ಛತ್ತೀಸ್‌ಗಢದ ಪ್ರತ್ಯೇಕ ರಾಜ್ಯದ ಬೇಡಿಕೆಯ ಹಿಂದೆ ಬುಡಕಟ್ಟು ಸಮುದಾಯಗಳ ಅಸ್ಮಿತೆ, ಪ್ರಾದೇಶಿಕ ಅಭಿವೃದ್ಧಿ ಮತ್ತು ಸ್ಥಳೀಯ ಸಂಪನ್ಮೂಲಗಳ ಮೇಲೆ ಹಕ್ಕು ಪಡೆಯುವ ಆಶಯಗಳಿದ್ದವು.

ಪಂಜಾಬ್ ಮತ್ತು ಹರಿಯಾಣ: ಭಾಷಿಕ ಹೋರಾಟದಿಂದ ಹೊಸ ರಾಜ್ಯ

1947ರ ದೇಶ ವಿಭಜನೆಯ ನಂತರ ಪಂಜಾಬ್‌ನಲ್ಲಿ ಭಾಷಿಕ ಮತ್ತು ಪ್ರಾದೇಶಿಕ ಮರುರಚನೆಯ ಬೇಡಿಕೆ ಹೆಚ್ಚಾಯಿತು. ಪಂಜಾಬಿ ಭಾಷಿಕರ ಪ್ರತ್ಯೇಕ ರಾಜ್ಯಕ್ಕಾಗಿ ಪಂಜಾಬಿ ಸುಬಾ ಚಳವಳಿ ನಡೆಯಿತು. ಅಕಾಲಿದಳ ಸೇರಿದಂತೆ ವಿವಿಧ ಸಂಘಟನೆಗಳು ಈ ಹೋರಾಟದಲ್ಲಿ ಪಾತ್ರ ವಹಿಸಿದ್ದವು.

ಪರಿಣಾಮ, 1966ರ ನವೆಂಬರ್ 1ರಂದು ಹಿಂದಿನ ಪಂಜಾಬ್‌ನ ಹಿಂದಿ ಭಾಷಿಕ ಪ್ರದೇಶಗಳನ್ನು ಪ್ರತ್ಯೇಕಿಸಿ ಹರಿಯಾಣ ರಾಜ್ಯ ರಚಿಸಲಾಯಿತು. ಕೆಲವು ಪರ್ವತ ಪ್ರದೇಶಗಳನ್ನು ಹಿಮಾಚಲ ಪ್ರದೇಶಕ್ಕೆ ಸೇರಿಸಲಾಯಿತು. ಪಂಜಾಬ್ ಹೊಸ ಗಡಿಗಳೊಂದಿಗೆ ಮುಂದುವರಿಯಿತು.

2026ಕ್ಕೆ ಪಂಜಾಬ್ ಮರುರಚನೆ ಮತ್ತು ಹರಿಯಾಣ ರಾಜ್ಯ ಸ್ಥಾಪನೆಯಾಗಿ 60 ವರ್ಷಗಳು ಪೂರ್ಣಗೊಂಡಿವೆ. ಆದರೂ, ಎರಡೂ ರಾಜ್ಯಗಳ ನಡುವೆ ನದಿ ನೀರಿನ ಹಂಚಿಕೆ ಮತ್ತು ಚಂಡೀಗಢದ ಸ್ಥಾನಮಾನದ ವಿವಾದಗಳು ಇಂದಿಗೂ ಮುಂದುವರಿದಿವೆ.

ಚಂಡೀಗಢ ಮತ್ತು ದೆಹಲಿ: ಕೇಂದ್ರಾಡಳಿತ ಪ್ರದೇಶಗಳ ವಿಶೇಷ ಇತಿಹಾಸ

ಪಂಜಾಬ್‌ಹರಿಯಾಣ ಮರುರಚನೆಯ ಸಂದರ್ಭದಲ್ಲಿ 1966ರ ನವೆಂಬರ್ 1ರಂದು ಚಂಡೀಗಢವನ್ನು ಕೇಂದ್ರಾಡಳಿತ ಪ್ರದೇಶವನ್ನಾಗಿ ಮಾಡಲಾಯಿತು. ವಿಶೇಷವೆಂದರೆ, ಚಂಡೀಗಢ ಇಂದಿಗೂ ಪಂಜಾಬ್ ಮತ್ತು ಹರಿಯಾಣ ಎರಡೂ ರಾಜ್ಯಗಳ ರಾಜಧಾನಿಯಾಗಿ ಕಾರ್ಯನಿರ್ವಹಿಸುತ್ತಿದೆ.

ದೆಹಲಿಯಲ್ಲಿಯೂ 1956ರ ನವೆಂಬರ್ 1ರಂದು ಮಹತ್ವದ ಆಡಳಿತಾತ್ಮಕ ಬದಲಾವಣೆ ನಡೆಯಿತು. ಹಿಂದೆ ಸಿ ವರ್ಗದ ರಾಜ್ಯವಾಗಿದ್ದ ದೆಹಲಿಯನ್ನು ಕೇಂದ್ರಾಡಳಿತ ಪ್ರದೇಶವನ್ನಾಗಿ ಪರಿವರ್ತಿಸಲಾಯಿತು. ನಂತರ, 1991ರ ಸಂವಿಧಾನ ತಿದ್ದುಪಡಿಯ ಮೂಲಕ ದೆಹಲಿಗೆ ರಾಷ್ಟ್ರೀಯ ರಾಜಧಾನಿ ಪ್ರದೇಶದ ವಿಶೇಷ ಸ್ಥಾನಮಾನ ಕಲ್ಪಿಸಲಾಯಿತು.

ಅಂಡಮಾನ್‌ನಿಕೋಬಾರ್ ಮತ್ತು ಲಕ್ಷದ್ವೀಪ: ದ್ವೀಪಗಳ ಆಡಳಿತಾತ್ಮಕ ಗುರುತು

1956ರ ನವೆಂಬರ್ 1ರಂದು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಕೇಂದ್ರಾಡಳಿತ ಪ್ರದೇಶದ ಸ್ಥಾನಮಾನ ಪಡೆದವು.

ಅಂತೆಯೇ, ಲಕ್ಷದ್ವೀಪವೂ 1956ರ ನವೆಂಬರ್ 1ರಂದು ಮದ್ರಾಸ್ ರಾಜ್ಯದಿಂದ ಪ್ರತ್ಯೇಕಗೊಂಡು ಕೇಂದ್ರಾಡಳಿತ ಪ್ರದೇಶವಾಯಿತು. ಆಗ ಲಕ್ಕದೀವ್, ಮಿನಿಕಾಯ್ ಹಾಗೂ ಅಮಿನಿದೀವಿ ದ್ವೀಪಗಳು ಎಂಬ ಹೆಸರಿನಿಂದ ಕರೆಯಲಾಗುತ್ತಿದ್ದ ಈ ಪ್ರದೇಶವನ್ನು 1973ರಲ್ಲಿ ಲಕ್ಷದ್ವೀಪ ಎಂದು ಮರುನಾಮಕರಣ ಮಾಡಲಾಯಿತು.

ಪುದುಚೇರಿ: ಫ್ರೆಂಚ್ ವಸಾಹತುಶಾಹಿಯಿಂದ ವಿಮೋಚನೆಯ ದಿನ

ಪುದುಚೇರಿಯ ನವೆಂಬರ್ 1ರ ಇತಿಹಾಸ ಉಳಿದ ಪ್ರದೇಶಗಳಿಗಿಂತ ಭಿನ್ನವಾಗಿದೆ. ಭಾರತ 1947ರಲ್ಲಿ ಸ್ವಾತಂತ್ರ್ಯ ಪಡೆದರೂ ಪುದುಚೇರಿ, ಕಾರೈಕಾಲ್, ಮಾಹೆ ಹಾಗೂ ಯಾನಂ ಪ್ರದೇಶಗಳು ಫ್ರೆಂಚ್ ಆಡಳಿತದಲ್ಲಿಯೇ ಮುಂದುವರಿದಿದ್ದವು.

ಸ್ಥಳೀಯ ಜನರ ಹೋರಾಟ ಮತ್ತು ಭಾರತದೊಂದಿಗೆ ವಿಲೀನಗೊಳ್ಳಬೇಕೆಂಬ ಬೇಡಿಕೆಯ ಪರಿಣಾಮವಾಗಿ 1954ರ ನವೆಂಬರ್ 1ರಂದು ಫ್ರೆಂಚ್ ಆಡಳಿತದಿಂದ ಅಧಿಕಾರ ಹಸ್ತಾಂತರ ನಡೆಯಿತು. ಆದರೂ, ಕಾನೂನಾತ್ಮಕ ಅಧಿಕಾರ ಹಸ್ತಾಂತರ ಪೂರ್ಣಗೊಂಡದ್ದು 1962ರ ಆಗಸ್ಟ್ 16ರಂದು.

ಹೀಗಾಗಿ, ನವೆಂಬರ್ 1ಅನ್ನು ಪುದುಚೇರಿಯಲ್ಲಿ ವಿಮೋಚನಾ ದಿನವನ್ನಾಗಿ ಆಚರಿಸಲಾಗುತ್ತದೆ.

ನವೆಂಬರ್ 1ರೊಂದಿಗೆ ಬೆಸೆದುಕೊಂಡಿರುವ ಈ ಎಲ್ಲ ಇತಿಹಾಸಗಳಲ್ಲಿ ಒಂದು ಮಹತ್ವದ ಸಾಮ್ಯತೆಯಿದೆ. ಅದು; ಜನರು ತಮ್ಮ ಭಾಷೆ, ಸಂಸ್ಕೃತಿ, ಪ್ರಾದೇಶಿಕ ಅಸ್ಮಿತೆ ಹಾಗೂ ಆಡಳಿತಾತ್ಮಕ ಹಕ್ಕುಗಳಿಗಾಗಿ ಹೋರಾಡಿದ್ದಾರೆ ಎಂಬುದು.

ಕನ್ನಡ ಏಕೀಕರಣ ಚಳವಳಿ, ಐಕ್ಯ ಕೇರಳದ ಆಶಯ, ತೆಲುಗು ಭಾಷಿಕರ ಹೋರಾಟ, ಪಂಜಾಬಿ ಸುಬಾ ಚಳವಳಿ, ಛತ್ತೀಸ್‌ಗಢದ ಪ್ರತ್ಯೇಕ ರಾಜ್ಯದ ಬೇಡಿಕೆ ಹಾಗೂ ಪುದುಚೇರಿಯ ವಿಮೋಚನಾ ಹೋರಾಟ ಇವೆಲ್ಲವೂ ಜನರ ರಾಜಕೀಯ ಮತ್ತು ಸಾಂಸ್ಕೃತಿಕ ಆಶಯಗಳ ಅಭಿವ್ಯಕ್ತಿಗಳು.

ಇವಿಎಂಗಿಂತಲೂ ಭೀಕರ 'ಎಸ್‌ಐಆರ್' ತಂತ್ರ: ಚುನಾವಣಾ ಆಯೋಗದ ಅಸಾಂವಿಧಾನಿಕ ನಡೆಯನ್ನು ಎಳೆಎಳೆಯಾಗಿ ಬಿಚ್ಚಿಟ್ಟ

2047ರವರೆಗೆ ಅಧಿಕಾರದಲ್ಲಿ ಮುಂದುವರಿಯುವ ಆಡಳಿತ ಪಕ್ಷದ ಹುನ್ನಾರ, ಇವಿಎಂ () ದೋಷಗಳಿಗಿಂತಲೂ ಭೀಕರವಾದ ನೂತನ ಮತದಾರರ ಪಟ್ಟಿ ಪರಿಷ್ಕರಣೆ () ಪ್ರಕ್ರಿಯೆ ಎಂದು ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲ ಪ್ರಶಾಂತ್ ಭೂಷಣ್ ಆತಂಕ ವ್ಯಕ್ತಪಡಿಸಿದರು.

ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಸೇರಿದ್ದ ಲಕ್ಷಾಂತರ ಜನರನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದ ಚುನಾವಣಾ ವ್ಯವಸ್ಥೆಯಲ್ಲಿ ನಡೆಯುತ್ತಿರುವ ಬೃಹತ್ ಅಕ್ರಮಗಳು ಮತ್ತು ಮತದಾರರ ಪಟ್ಟಿಯಿಂದ ಅಸಾಂವಿಧಾನಿಕವಾಗಿ ಹೆಸರುಗಳನ್ನು ಕೈಬಿಡುತ್ತಿರುವ ಆತಂಕಕಾರಿ ವಿಚಾರಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು. ದೇಶದ ಆರ್ಥಿಕತೆಯನ್ನು ನಾಶಮಾಡಿ, ಉದ್ಯೋಗಗಳನ್ನು ಕಸಿದುಕೊಂಡು, ದೇಶವನ್ನು ಅದಾನಿ ಮತ್ತು ಅಂಬಾನಿಯಂತಹವರ ಕೈಗೊಪ್ಪಿಸಿರುವ ಸರ್ಕಾರ, ಇದೀಗ 2047ರವರೆಗೆ ಆಡಳಿತ ನಡೆಸುವ ಕನಸು ಕಾಣುತ್ತಿದೆ ಎಂದು ಅವರು ವಾಗ್ದಾಳಿ ನಡೆಸಿದರು.

ಇವಿಎಂಗಳ ಮೂಲಕ ಅಕ್ರಮ ನಡೆಸುವುದರ ಜೊತೆಗೆ, ಇದೀಗ ಭಯಾನಕವಾದ ಹೊಸ ವಿಧಾನದ () ಮೂಲಕ ದೇಶಾದ್ಯಂತ ಬರೋಬ್ಬರಿ 13 ಕೋಟಿಗೂ ಅಧಿಕ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಅಳಿಸಿಹಾಕಲಾಗಿದೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ. ಒಬ್ಬ ವ್ಯಕ್ತಿ ಒಂದೇ ನಗರದಲ್ಲಿ ಅಥವಾ ಕ್ಷೇತ್ರದಲ್ಲೇ ಬೇರೆ ಕಡೆಗೆ ಸ್ಥಳಾಂತರಗೊಂಡರೂ, ಅವರ ಹೆಸರನ್ನು ಕರಡು ಪಟ್ಟಿಯಿಂದ ( ) ಸ್ವಯಂಚಾಲಿತವಾಗಿ ತೆಗೆದುಹಾಕಲಾಗುತ್ತಿದೆ. ಇದಕ್ಕೆ ಉದಾಹರಣೆಯಾಗಿ ದೆಹಲಿಯಲ್ಲಿ 42 ಲಕ್ಷ ಜನರ ಹೆಸರುಗಳನ್ನು ಕರಡು ಪಟ್ಟಿಯಿಂದ ತೆಗೆದುಹಾಕಲಾಗಿದ್ದು, 33 ಲಕ್ಷ ಜನರಿಗೆ ನೋಟಿಸ್ ನೀಡಲಾಗಿದೆ ಎಂದು ವಿವರಿಸಿದರು.

ಇಂಡಿಯನ್ ಎಕ್ಸ್‌ಪ್ರೆಸ್ ಪತ್ರಿಕೆಯ ತನಿಖಾ ವರದಿಯನ್ನು ಉಲ್ಲೇಖಿಸಿದ ಅವರು, ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ಅವರು ಉಳಿದ ಇಬ್ಬರು ಆಯುಕ್ತರ ವಿರೋಧ ಮತ್ತು ಆಕ್ಷೇಪಣೆಗಳ ನಡುವೆಯೂ ಈ ಅಸಾಂವಿಧಾನಿಕ ಆದೇಶಗಳನ್ನು ಹೊರಡಿಸಿದ್ದಾರೆ ಎಂದು ತಿಳಿಸಿದರು. ನಿಯಮಗಳ ಪ್ರಕಾರ ಮತದಾರರ ಸೇರ್ಪಡೆ ಅಥವಾ ಕಡಿತದ ಅಧಿಕಾರ ಸ್ಥಳೀಯ ಚುನಾವಣಾ ನೋಂದಣಾಧಿಕಾರಿಗೆ () ಇರುತ್ತದೆ. ಆದರೆ, ಗ್ಯಾನೇಶ್ ಕುಮಾರ್ ಅವರು ಈ ಅಧಿಕಾರವನ್ನು ಕಸಿದುಕೊಂಡು ದೆಹಲಿಯಲ್ಲಿ ಕುಳಿತಿರುವ ಐಟಿ ಸೆಲ್‌ಗೆ ( ) ನೀಡಿದ್ದಾರೆ, ಇದು ಸಂಪೂರ್ಣ ಕಾನೂನುಬಾಹಿರ ಎಂದು ಅವರು ಕಿಡಿಕಾರಿದರು.

ಈ ಸಂಪೂರ್ಣ ಪ್ರಕ್ರಿಯೆಯ ನಿಯಂತ್ರಣವನ್ನು ಆಡಳಿತಾರೂಢ ಬಿಜೆಪಿಗೆ ನೀಡಲಾಗಿರುವ ಅನುಮಾನಗಳಿವೆ ಎಂದು ಅವರು ಆತಂಕ ವ್ಯಕ್ತಪಡಿಸಿದರು. ಪಶ್ಚಿಮ ಬಂಗಾಳದಲ್ಲಿ 27 ಲಕ್ಷ ಮತದಾರರ ಸೇರ್ಪಡೆಯ ಕುರಿತು ಅಲ್ಲಿನ ಅಧಿಕಾರಿಗಳಿಗೇ ಮಾಹಿತಿ ಇಲ್ಲದಂತೆ ಮೇಲ್ಮನವಿಗಳನ್ನು ಸಲ್ಲಿಸಲಾಗಿದೆ. ಇಂತಹ ಬೃಹತ್ ಮಟ್ಟದ ಕಾನೂನುಬಾಹಿರ ಕೃತ್ಯಗಳನ್ನು ಎಸಗಿರುವ ಗ್ಯಾನೇಶ್ ಕುಮಾರ್, ಭವಿಷ್ಯದಲ್ಲಿ ತಮ್ಮ ವಿರುದ್ಧ ಯಾವುದೇ ಕಾನೂನು ಕ್ರಮ ಜರುಗಬಾರದು ಎಂಬ ಕಾರಣಕ್ಕಾಗಿ ತಮಗೆ ರಕ್ಷಣೆ () ನೀಡುವಂತೆ ಸರ್ಕಾರವನ್ನು ಕೋರಿದ್ದರು. ಅದಕ್ಕೆ ತಕ್ಕಂತೆ ಸರ್ಕಾರವು ಕಾನೂನೊಂದನ್ನು ರೂಪಿಸಿ ಅವರಿಗೆ ರಕ್ಷಣೆ ಒದಗಿಸಿದೆ ಎಂದು ಪ್ರಶಾಂತ್ ಭೂಷಣ್ ಅವರು ಈ ಇಡೀ ವ್ಯವಸ್ಥಿತ ಅಕ್ರಮದ ಹಿಂದಿನ ಒಳಸಂಚನ್ನು ವಿವರಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR